# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 134 | ಆರ್ಎನ್ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 27–12–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 134 | RNI No: KARKAN/2023/88462 | KA/SK/CTA-874/2024-2026 | Chitradurga | Date: 27-12-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಡಿ.29 ರಂದು ಗೆಜೆಟೆಡ್ ಪ್ರೊಬೆಷನರ್ ಗ್ರೂಪ್ ಹುದ್ದೆಗಳ ಮರು ಪರೀಕ್ಷೆ 2

ಖಾದಿ ಉತ್ಸವ ಮೇಳಕ್ಕೆ ಮುಖ್ಯಮಂತ್ರಿಗಳಿಂದ ಚಾಲನೆ 3

ಡಿ.28 ರಿಂದ ಜನವರಿ 1 ರ ವರೆಗೆ ರಾಜಭ ಮನೆಯಲ್ಲಿ ಫಲಪುಷ್ಪ ಪ್ರದರ್ಶನ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಹೊಸದುರ್ಗದಲ್ಲಿ ಇಂದು ಪುರಸಭೆಯ ಆಯ-ವ್ಯಯ ಪೂರ್ವ ಭಾವಿ ಸಭೆ

» **ಹೊಸದುರ್ಗ**

ಪಟ್ಟಣದ ಪುರಸಭೆಯ 2025–26 ನೇ ಸಾಲಿನ ಆಯ–ವ್ಯಯವನ್ನು ಸಿದ್ದಪಡಿಸುವ ಸಲುವಾಗಿ ಡಿ.27 ರಂದು ಶುಕ್ರವಾರ ಬೆಳಿಗ್ಗೆ 11.30 ಕ್ಕೆ ಪುರಸಭಾ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿಆನಂದ್ ಅವರ ಅಧ್ಯಕ್ಷತೆಯಲ್ಲಿ ಪುರಸಭಾ ಸಭಾಂಗಣದಲ್ಲಿ ಸಾರ್ವಜನಿಕರ ಪೂರ್ವಭಾವಿ ಸಭೆಯನ್ನು ಕರೆಯಲಾಗಿದ್ದು ಈ ಒಂದು ಮಹತ್ವದ ಸಭೆಗೆ ಪಟ್ಟಣದ ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಾರ್ವಜನಿಕರು ಭಾಗವಹಿಸಿ 2025–26 ನೇ ಸಾಲಿನ ಆಯ–ವ್ಯಯ ಸಿದ್ದಪಡಿಸಲು ತಮ್ಮ ಸೂಕ್ತ ಸಲಹೆಗಳನ್ನು ಮುಕ್ತವಾಗಿ ನೀಡಬೇಕೆಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ಪ್ರಕಟಣೆಯಲ್ಲಿ ತಿಳಿಸಿದ್ದು ಎಲ್ಲಾ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸೂಕ್ತ ಸಲಹೆ ಸೂಚನೆಗಳನ್ನು ನೀಡಿ ಹೊಸದುರ್ಗ ಪಟ್ಟಣದ ಅಭಿವೃದ್ದಿಗೆ ಸಹಕರಿಸಬೇಕೆಂದು ಅವರು ಮನವಿ ಮಾಡಿದ್ದಾರೆ. ಇಂದು ಶಾಲಾ ವಾರ್ಷಿಕೋತ್ಸವ:ಹೊಸದುರ್ಗ ಪಟ್ಟಣದ ಶ್ರೀ ವಾಣಿವಿಲಾಸ ಸಂಯುಕ್ತ ಪ್ರೌಢಶಾಲೆಯ 47 ನೇ ವರ್ಷದ ಶಾಲಾ ವಾರ್ಷಿಕೋತ್ಸವವು ಡಿ.27 ರಂದು ಶುಕ್ರವಾರ ಸಂಜೆ 5 ಗಂಟೆಗೆ ಶಾಲಾ ಆವರಣದಲ್ಲಿ ನಡೆಯಲಿದ್ದು ತಿಪಟೂರು ಶ್ರೀ ರಾಘವೇಂದ್ರ ವಿದ್ಯಾ ಸಂಸ್ಥೆಯ ಅಧ್ಯಕ್ಷ ಕೆ.ರಮೇಶ್‌ಸಿಂಗ್ ಅಧ್ಯಕ್ಷತೆ ವಹಿಸಲಿದ್ದು ಮುಖ್ಯ ಅತಿಥಿಗಳಾಗಿ ಬಿಇಓ ಸೈಯಾದ್ ಮೋಸಿನ್ ,ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಶಾಂತಕುಮಾರ್,ಸಿಪಿಐ ಎನ್.ತಿಮ್ಮಣ್ಣ, ತಾಲೂಕು ಅರಣ್ಯಾಧಿಕಾರಿ ಸುನಿಲ್, ಪೌರಾಡಳಿತ ಮತ್ತು ಹಜ್ ಸಚಿವರ ಆಪ್ತ ಸಲಹೆಗಾರ ಫಯಾಜ್‌ಅಮೀದ್ ಎ, ಚಿತ್ರದುರ್ಗ ಲೋಕಾಯುಕ್ತ ಪೋಲಿಸ್ ಸತೀಶ್ ಎಲ್.ಜಿ, ಸಿವಿಲ್‌ಇಂಜಿನಿಯರ್ ಸಂತೋಷ್, ಉದ್ಯಮಿ ಲೋಹಿತಾಶ್ವ, ಚಲನಚಿತ್ರ ನಟಿ ರೋಜಾ, ಬೆಸ್ಕಾಂ ಇಲಾಖೆಯ ಸಹಾಯಕ ಶ್ರೀಹರಿ, ಬೆಂಗಳೂರು ಪೋಲಿಸ್ ಇಲಾಖೆಯ ಜಶ್ವಂತ್, ಎನ್.ಕೆ.ಕುಮಾರ್ ಉದ್ಯಮಿ ಯೂಸೋಫ್,ಸಾರಿಗೆ ಇಲಾಖೆಯ ಅಶೋಕ್,ಡಿ.ಫಾರ್ಮಸಿ ದರ್ಶನ್‌ಜೈನ್ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ.

### ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» **ಚಿತ್ರದುರ್ಗ**

2024–25ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯ ಪ್ರವೇಶಾತಿಯನ್ನು 2025ರ ಜನವರಿ 10ರವರೆಗೆ ವಿಸ್ತರಿಸಲಾಗಿದೆ. ಪದವಿ ಮಟ್ಟದ ಕೋರ್ಸ್, ವೃತ್ತಿಪರ ಮತ್ತು ಸ್ನಾತಕೋತ್ತರಕೋರ್ಸಿನಸಾಮಾನ್ಯವಿದ್ಯಾರ್ಥಿಗಳು ಮಾತ್ರ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶ https://shp.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿ. 29ಕ್ಕೆ ಮಾಸಿಕ ಗಮಕ ವಾಚನ ಕಾರ್ಯಕ್ರಮ

» **ಚಿತ್ರದುರ್ಗ**

ನಗರದ ಗಮಕಲಾಭಿಮಾನಿಗಳ ಸಂಘವು ನಡೆಸುತ್ತಿರುವ ಮಾಸಿಕ ಗಮಕ ವಾಚನ ವ್ಯಾಖ್ಯಾನ ಸಂಭ್ರಮದ 17ನೇ ಕಾರ್ಯಕ್ರಮವು ಇದೇ ತಿಂಗಳ 29ರ ಭಾನುವಾರ ಸಂಜೆ 6 ಗಂಟೆಗೆ ನಗರದ ಜೆ ಸಿ ಆರ್ ಬಡಾವಣೆಯ ಶ್ರೀ ಗಣಪತಿ ದೇವಾಲಯದ ಆವರಣದಲ್ಲಿ ನಡೆಯಲಿದೆ ಎಂದು ಸಂಘದ ಪ್ರಕಟಣೆ ತಿಳಿಸಿದೆ ಈ ಸಂದರ್ಭದಲ್ಲಿ ಕಲಾವಿದರಾದ ಮಲ್ಲಾಪುರ ಗೊಲ್ಲರಹಟ್ಟಿಯ ವೀರಣ್ಣ ವಾಚನ ಮಾಡಲಿದ್ದು ,ವ್ಯಾಖ್ಯಾನವನ್ನು ಚಿತ್ರದುರ್ಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಕಾರ್ಯದರ್ಶಿ, ಹುರುಳಿ .ಎಂ .ಬಸವರಾಜ ನೆರವೇರಿಸಲಿದ್ದಾರೆ . ದೇವಿ ಪುರಾಣದ "ಚಂಡಮುಂಡ"ರ ಸಂಹಾರ ಎಂಬ ಪ್ರಸಂಗವನ್ನು ನಡೆಸಿಕೊಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕರ್ನಾಟಕ ರತ್ನಶ್ರೀ ರಾಜ್ಯ ಪ್ರಶಸ್ತಿ ವಿಜೇತರಾದ ಚಿತ್ರದುರ್ಗದ ಶ್ರೀಮತಿ ಸತ್ಯಪ್ರಭಾ ವಸಂತಕುಮಾರ್ ಭಾಗವಹಿಸಲಿದ್ದಾರೆ. ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಲೆ, ಕಲಾವಿದರನ್ನು ಪ್ರೋತ್ಸಾಹಿಸಿ ಯಶಸ್ವಿಗೊಳಿಸಬೇಕೆಂದು ಸಂಘಟಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬೆಳೆಹಾನಿ ಪರಿಹಾರಕ್ಕೆ ಆಗ್ರಹಿಸಿ ಪ್ರತಿಭಟನೆ

» **ಚಿತ್ರದುರ್ಗ**

ಮುಂಗಾರು ಮಳೆ ಹೆಚ್ಚಾಗಿ ಹಾಳಾಗಿರುವ ಈರುಳ್ಳಿ ಬೆಳೆ ಹಾಗೂ ಇಲಾಖೆವತಿಯಿಂದ ವಿತರಣೆ ಮಾಡಿರುವ ಕಳಪೆ ತೊಗರಿ ಬೀಜ ವಿತರಣೆಯಿಂದಾಗಿ ಹಾಳಾಗಿದ್ದು ಬೆಳೆಗೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ರಾಜ್ಯ ರೈತ ಸಂಘದವರು ಆಗ್ರಹಿಸಿದರು.

ಚಿತ್ರದುರ್ಗ ನಗರದಲ್ಲಿ ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿದ ರೈತ ಸಂಘದ ಪದಾಧಿಕಾರಿಗಳು ಮುಂಗಾರು ಹಂಗಾಮಿನಲ್ಲಿ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರು ಉತ್ತಮ ಹಾಗೂ ಗುಣಮಟ್ಟದ ಬೀಜಗಳು ದೊರೆಯುತ್ತವೆ ಎಂದು ರೈತ ಸಂಪರ್ಕ ಕೇಂದ್ರಗಳಿಗೆ ಹೋಗಿ ಎಲ್ಲಾ ತರಹದ ಬೀಜಗಳನ್ನು ಖರೀದಿ ಮಾಡಿದ್ದಾರೆ. ಆದರೆ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ ತೊಗರಿ ಬೀಜವು ಸುಮಾರು 6–7 ತಿಂಗಳಾದರು ಹೂವು ಕಾಯಿ ಕಟ್ಟಿರುವುದಿಲ್ಲ, ರೈತರು 1 ಎಕರೆಗೆ ಸುಮಾರು 35–40 ಸಾವಿರ ಹಣ ಖರ್ಚು ಮಾಡಿ, ಹಣ ಕಳೆದ ಕೊಂಡಿರುತ್ತಾರೆ ಆದ್ದರಿಂದ ಸಂಬಂಧಪಟ್ಟ



ಕೃಷಿ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ಸೂಕ್ತ ಪರಿಹಾರ ನೀಡಬೇಕೆಂದು ಒತ್ತಾಯಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜಿಲ್ಲೆಯಲ್ಲಿ ಈರುಳ್ಳಿ ಬೆಳೆಯನ್ನು ಹೆಚ್ಚಾಗಿ ಬೆಳೆಯುತ್ತಿದ್ದು, ಸುಮಾರು 4 ವರ್ಷದಿಂದಲೂ ಈರುಳ್ಳಿ ಬೆಳೆದ ರೈತರು ಸಂಕಷ್ಟಕ್ಕೀಡಾಗಿದ್ದಾರೆ. 2024ರ ಮುಂಗಾರು ಮಳೆಯು ಹೆಚ್ಚು ಬಂದಿದ್ದು, ಈರುಳ್ಳಿ ಬೆಳೆಯು ಜಮೀನಿನಲ್ಲಿ ಕೊಳೆತು ಹೋಗಿದೆ. ಜಿಲ್ಲಾ ಪಂಚಾಯತ್ ಸಿಇಓ ರೈತರ ಜಮೀನಿಗೆ ಭೇಟಿ ಮಾಡಿ ಈರುಳ್ಳಿ ನಷ್ಟವಾಗಿರುವುದನ್ನು ವೀಕ್ಷಿಸಿದರು. ಇದುವರೆಗೂ ರೈತರಿಗೆ ಕೆಲವೊಂದು ಪಂಚಾಯಿತಿಗೆ ಮಾತ್ರ ಪರಿಹಾರ ಹಣವನ್ನು ಹಾಕಿದ್ದು, ಅತಿ ಹೆಚ್ಚು ಈರುಳ್ಳಿ ಬೆಳೆಯುವಂತಹ ಪಂಚಾಯಿತಿಗಳಿಗೆ ಪರಿಹಾರವನ್ನು ಹಾಕದೆ ತಾರತಮ್ಯ ಮಾಡಲಾಗಿದೆ. ಆದ್ದರಿಂದ ಕೂಡಲೇ ಎಲ್ಲಾ ರೈತರಿಗೂ ಪರಿಹಾರ ಹಣವನ್ನು ನೀಡಬೇಕು ಎಂದು ಆಗ್ರಹಿಸಿದರು.

ವಿದ್ಯುತ್ ಅಕ್ರಮ ಸಕ್ರಮವನ್ನು ಸರ್ಕಾರ 2023ರಲ್ಲಿರದ್ದುಮಾಡಿದೆಇದರಿಂದರೈತರಿಗೆ ತುಂಬಾ ಅನಾನುಕೂಲವಾಗುತ್ತಿದೆ, ರೈತರು ವಿದ್ಯುತ್ ಸಂಪರ್ಕ ಪಡಯಬೇಕಾದರೆ 3–4 ಲಕ್ಷ ರೂಗಳನ್ನು ರೈತ ಖರ್ಚು ಮಾಡಬೇಕಿದೆ ಈ ಹಿನ್ನಲೆಯಲ್ಲಿ ಸರ್ಕಾರ ಈ ಕೂಡಲೇ ಅಕ್ರಮ–ಸಕ್ರಮವನ್ನು ಮರು ಸ್ಥಾಪನೆ ಮಾಡಬೇಕು ಎಂದು ಒತ್ತಾಯಿಸಲಾಯಿತು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಧನಂಜಯ, ಬಸ್ತಿಹಳ್ಳಿ ಸುರೇಶ್ ಬಾಬು, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಭೂತಯ್ಯ, ಇಸ್ಸಮುದ್ರ ಪ್ರಭು ಮಲ್ಲಾಪುರ ತಿಪ್ಪೇಸ್ವಾಮಿ, ಹಿರಿಯೂರು ಅಧ್ಯಕ್ಷ ಶಿವಕುಮಾರ್, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಯುವ ಅಧ್ಯಕ್ಷ ಚೇತನ ಯಳನಾಡು, ತಿಪ್ಪೇಸ್ವಾಮಿ ಕೆರೆನಹಳ್ಳಿ, ಗೌಸ್ ಪೀರ್, ಸುರೇಶ್, ಶಿವರಾಜು, ಅಪ್ಪು, ಅಮರೇಶ್, ಅಜ್ಜಣ್ಣ, ಲಕ್ಷ್ಮೀಕಾಂತ್, ರೇವಣ್ಣ, ಸೇರಿದಂತೆ ಇತರರು ಭಾಗವಹಿಸಿದ್ದರು.

# ಅಂಬೇಡ್ಕರ್ ಅವಹೇಳನ: ಕೇಂದ್ರ ಗೃಹಸಚಿವ ವಿರುದ್ಧ ಕ್ರಮಕೈಗೊಳ್ಳಲು ಆಮ್ ಆದ್ಮಿಪಾರ್ಟಿ ಒತ್ತಾಯ

» **ಚಳ್ಳಕೆರೆ**

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಬಗ್ಗೆ ಲೋಕಸಭೆಯಲ್ಲಿ ಅವಹೇಳನಕಾರಿಯಾಗಿ ಮಾತನಾಡಿದ ಕೇಂದ್ರ ಗೃಹಸಚಿವ ಅಮಿತ್‌ಶಾರವರನ್ನು ಸಂಪುಟದಿಂದ ಕೈಬಿಡಬೇಕೆಂದು ತಾಲ್ಲೂಕು ಆಮ್‌ಆದ್ಮಿಪಾರ್ಟಿ ರಾಷ್ಟ್ರಪತಿಗಳಿಗೆ ಲಿಖಿತ ಮೂಲಕ ಮನವಿ ಮಾಡಿದೆ.

ತಾಲ್ಲೂಕು ಅಧ್ಯಕ್ಷ ಬಿ.ಪಾಪಣ್ಣ ಅಧ್ಯಕ್ಷತೆಯಲ್ಲಿ ತಹಶೀಲ್ದಾರ್ ರೇಹಾನ್‌ಪಾಷರವರಿಗೆ ಮನವಿ ನೀಡಿ, ಸಂವಿಧಾನವನ್ನು ರಚಿಸಿದ ಡಾ.ಬಿ.ಆರ್.ಅಂಬೇಡ್ಕರ್ ಬಗ್ಗೆ ಮಾತನಾಡಿರುವ ಕೇಂದ್ರ ಗೃಹ ಸಚಿವ ಅಮಿತ್‌ಶಾರವರ ವಿರುದ್ಧ ಕ್ರಮಕೈಗೊಳ್ಳಲು ರಾಷ್ಟ್ರಪತಿಗಳಿಗೆ ಮನವಿ ಮಾಡಲಾಗಿದೆ. ಯಾವುದೇ ಸಂದರ್ಭದಲ್ಲೂ ನಮ್ಮ ಪಕ್ಷ ಇಂತಹ ಹೇಳಿಕೆಗಳನ್ನು



ಬೆಂಬಲಿಸುವುದಿಲ್ಲ. ಅಮಿತ್‌ಶಾ ಬೇಷರತ್ ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿದ್ದಾರೆ.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳ ಕಾರ್ಯಾಲಯಕ್ಕೆ ಕಳಿಸುವ ಭರವಸೆ ನೀಡಿದರು. ಪಕ್ಷದ ಉಪಾಧ್ಯಕ್ಷ ಟಿ.ಓಬಳೇಶ್, ಸಂಘಟನಾ ಕಾರ್ಯದರ್ಶಿ ಓಂಕಾರಮೂರ್ತಿ, ಕಾರ್ಯದರ್ಶಿ ಜಿ.ಕೆ.ಶ್ರೀನಿವಾಸ್, ಸದಸ್ಯರಾದ ಡಿ.ಮಂಜುನಾಥ, ವೆಂಕಟೇಶ್, ತಮ್ಮಣ್ಣ, ಸುರೇಶ್ ಮುಂತಾದವರು ಉಪಸ್ಥಿತರಿದ್ದರು.

## ಹೊಳಲ್ಕೆರೆ ಪಟ್ಟಣದ ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರ: ಸಂಸದ



» **ಹೊಳಲ್ಕೆರೆ**

ಹೊಳಲ್ಕೆರೆ ಪಟ್ಟಣದ ಸರ್ವಾಂಗೀಣ ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರ ನೀಡಲಾಗುತ್ತದೆ ಎಂದು ಚಿತ್ರದುರ್ಗ ಸಂಸದ ಗೋವಿಂದ ಎಂ.ಕಾರಜೋಳ ತಿಳಿಸಿದರು. ಅವರು ಹೊಳಲ್ಕೆರೆ ಪಟ್ಟಣದ ಪುರಸಭೆಯ ಆವರಣದಲ್ಲಿ ಪುರಸಭೆಯಿಂದ ಗುರುವಾರ ಹಮ್ಮಿಕೊಂಡಿದ್ದ ವಿವಿಧ ಯೋಜನೆಗಳಿಂದ ಈಗಾಗಲೇ ಮಂಜೂರಾದ ನಿವೇಶನಗಳ ಈ ಖಾತೆ ಪತ್ರಗಳನ್ನು ಫಲಾನುಭವಿಗಳಿಗೆ ವಿತರಣೆ ಮಾಡಿ ಮಾತನಾಡಿದರು.

ಅಭಿವೃದ್ಧಿ ವಿಚಾರದಲ್ಲಿ ಎಲ್ಲಾ ಸದಸ್ಯರು ಒಗ್ಗಟ್ಟಿನಿಂದ ಜನರಿಗೆ ಸರ್ಕಾರಿ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಶ್ರಮಿಸಬೇಕು. ಇಲ್ಲಿನ ಸದಸ್ಯರು ಪಕ್ಷಾತೀತವಾಗಿ ಹೊಳಲ್ಕೆರೆ ಪುರಸಭೆಯಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಿ ಜನರಿಗೆ ತಲುಪಿಸುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು. ಪಕ್ಷ ರಾಜಕಾರಣದ ಚುನಾವಣೆಗೆ ಮಾತ್ರ ಸೀಮಿತವಾಗಬೇಕು. ಚುನಾವಣೆ ನಂತರ ನಮ್ಮನ್ನು ಚುನಾಯಿಸಿ ಕಳಿಸಿದ ಜನರಿಗೆ ನ್ಯಾಯ ಕಲ್ಪಿಸಲು ಸರ್ಕಾರದ ಸೌಲಭ್ಯಗಳನ್ನು ಜನರ ಮನೆಬಾಗಿಲಿಗೆ ತಲುಪಿಸಲು ನಾವು ಮುಂದಾಗಬೇಕು ಎಂದು ತಿಳಿಸಿದರು.


ಪುಟ ↘ 2


## ಪ್ರಮುಖ ಸುದ್ದಿ

### ಡಾಟಾ ಎಂಟ್ರಿ ಆಪರೇಟರ್‌ಗಳ ದಿನಾಚರಣೆಯಲ್ಲಿ ಪಿಡಿಓ ಪಾತಪ್ಪ ಸಲಹೆ

# ಕೆಲಸದ ನಿರ್ವಹಣೆ ಜೊತೆಗೆ ಆರೋಗ್ಯದ ಎಚ್ಚರವಿರಲಿ





» **ಚಿತ್ರದುರ್ಗ**

ಡಾಟಾ ಎಂಟ್ರಿ ಆಪರೇಟರ್‌ಗಳು ಕಚೇರಿ ಕೆಲಸ ನಿರ್ವಹಣೆ ಒತ್ತಡದ ಜೊತೆಗೆ ಆರೋಗ್ಯದ ಬಗ್ಗೆಯೂ ಎಚ್ಚರವಹಿಸಬೇಕು ಎಂದು ಮೆದೇಹಳ್ಳಿ ಪಿಡಿಓ ಆರ್.ಪಾತಪ್ಪ ಹೇಳಿದರು.

ಚಾರ್ಲ್ಸ್ ಬ್ಯಾಬೇಜ್ ರವರ ಸ್ಮರಣಾರ್ಥವಾಗಿ, ಗ್ರಾಮ ಪಂಚಾಯಿತಿ ಕ್ಲರ್ಕ್– ಕಂ ಡಾಟಾ ಎಂಟ್ರಿ ಆಪರೇಟರ್‌ಗಳ ಕ್ಷೇಮಾಭಿವೃದ್ಧಿಸಂಘದವತಿಯಿಂದನಗರದ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ "ಡಾಟಾ ಎಂಟ್ರಿ ಆಪರೇಟರ್‌ಗಳ ದಿನಾಚರಣೆ" ಸಮಾರಂಭ ಕಾರ್ಯಕ್ರಮದಲ್ಲಿಅವರುಮಾತನಾಡಿದರು. ಡಾಟಾ ಎಂಟ್ರಿ ಆಪರೇಟರ್‌ಗಳು ಒತ್ತಡದಲ್ಲಿ ಕಾರ್ಯ ನಿರ್ವಹಿಸುತ್ತಾರೆ. ಗ್ರಾಮ ಪಂಚಾಯಿತಿಗಳಲ್ಲಿ ಇಬ್ಬರು ಗಣಕಯಂತ್ರ ನಿರ್ವಾಹಕರ ಅವಶ್ಯಕತೆ ಇದೆ. ಡಾಟಾ ಎಂಟ್ರಿ ಆಪರೇಟರ್‌ಗಳ ಕಣ್ಣಿನ ದೃಷ್ಟಿ ಕಾಪಾಡುವ ಉದ್ದೇಶದಿಂದ ಕಂಪ್ಯೂಟರ್‌ಗಳಿಗೆ ಸ್ಕ್ರೀನ್‌ಗಾರ್ಡ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಸಹಾಯಕ ನಿರ್ದೇಶಕಿ ಆರ್. ರೂಪಕುಮಾರಿ ಮಾತನಾಡಿ, ಚಾರ್ಲ್ಸ್ ಬ್ಯಾಬೇಜ್ ರವರ ಸ್ಮರಣಾರ್ಥ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಪ್ರೋತ್ಸಾಹಿಸುವುದಕ್ಕಾಗಿ ಸರ್ಕಾರ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಮುಂದಿನ ದಿನಗಳಲ್ಲಿ ಸರ್ಕಾರವು ತಮ್ಮ ಬೇಡಿಕೆಗಳನ್ನು ಈಡೇರಿಸುವ ಭರವಸೆಯೂ ಕೂಡ ಇದೆ ಎಂದರು.

ಡಿ.ಎಸ್.ಹಳ್ಳಿ ಗ್ರಾಂ.ಪಂ.ಆಪರೇಟರ್ ಅಶ್ವಥ್ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ವ್ಯವಸ್ಥಾಪಕ ಇರ್ಫಾನ್, ಯೋಜನಾಧಿಕಾರಿ ಡಿ.ರಾಘವೇಂದ್ರ, ಸಹಾಯಕ ಲೆಕ್ಕಾಧಿಕಾರಿ ಕೆಂಚಪ್ಪ, ನೌಕರರ ಸಂಘದ ನಿರ್ದೇಶಕರಾದ ಎಸ್.ಮಾರುತಿ, ನಿಜಪ್ಪ, ಸೊಂಡೆಕೊಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಿ.ಕೆ.ನಾಸೀರ್ ಪಾಷಾ, ಎಂಐಎಸ್ ಸಂಯೋಜಕ ಉಮೇಶ್, ತಾಂತ್ರಿಕ ಸಂಯೋಜಕ ಪ್ರತಾಪ್, ಐ.ಇ.ಸಿ ಸಂಯೋಜಕ ಸತ್ಯನಾರಾಯಣ, ಡಾಟಾ ಎಂಟ್ರಿ ಆಪರೇಟರ್ ನೌಕರರ ಸಂಘದ ಜಿಲ್ಲಾಧ್ಯಕ್ಷ ಜಿ.ಜಗದೀಶ್, ಮಹಿಳಾ ತಾಲ್ಲೂಕು ಅಧ್ಯಕ್ಷೆ ಶಿವಮ್ಮ ಸೇರಿದಂತೆ ತಾಲ್ಲೂಕಿನ ಎಲ್ಲಾ ಡಾಟಾ ಎಂಟ್ರಿ ಆಪರೇಟರ್‌ಗಳು ಮತ್ತು ಕೂಸಿನ ಮನೆಯ ಸಹಾಯಕ ಸಿಬ್ಬಂದಿ ಉಸ್ಥಿತಿರಿದ್ದರು.

## ಫಾಸ್ಟ್ ನ್ಯೂಸ್

### ಗಿರಿಯಮ್ಮನಹಳ್ಳಿ ಬಸವರಾಜು ನಾಪತ್ತೆ: ಪೊಲೀಸರಿಗೆ ದೂರು

» ಚಳ್ಳಕೆರೆ

ತಾಲ್ಲೂಕಿನ ತಳಕು ಪೊಲೀಸ್ ಠಾಣೆ ಗಿರಿಯಮ್ಮನಹಳ್ಳಿಯ ಎಚ್.ಬಸವರಾಜು(58) ಎಂಬ ವ್ಯಕ್ತಿ ಇತ್ತೀಚೆಗೆ ಮನೆಯಿಂದ ಹೊರಗೆ ಹೋದವನ್ನುಇದುವರೆಗೂವಾಪಸ್‌ಬಾರದಕಾರಣ ಸಹೋದರ ಎಚ್.ತಿಪ್ಪಯ್ಯ ತಳಕು ಪೊಲೀಸ್ ಠಾಣೆಗೆ ಪತ್ತೆಮಾಡುವಂತೆ ದೂರು ನೀಡಿದ್ದಾನೆ. ನಾಪತ್ತೆಯಾದ ವ್ಯಕ್ತಿ ಎಚ್.ಬಸವರಾಜು ಈ ಹಿಂದೆ ಒಮ್ಮೆ ಮನೆಬಿಟ್ಟುಹೋಗಿ ವಾಪಸ್ ಮರಳಿದ್ದು, ಪುನಃ ಮನೆಯಿಂದ ನಾಪತ್ತೆಯಾಗಿದ್ದಾರೆ. ಠಾಣಾಧಿಕಾರಿ ನಾಪತ್ತೆಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್ ಇವರ ಅಧ್ಯಕ್ಷತೆಯಲ್ಲಿ ಡಿ.30 ರಂದು ಮಧ್ಯಾಹ್ನ 2 ಗಂಟೆಗೆ ಜಿಲ್ಲಾ ಪಂಚಾಯತಿಯ ಎಸ್.ಎಸ್. ಎಂ.ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಆಯ್ಕೆ ಸಮಿತಿ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ನಿಗಮಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಡಿ.27 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯ್ಕೆ ಸಮಿತಿ ಸಭೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ.ಬಿ.ಇಟ್ನಾಳ್ ಇವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ದಾವಣಗೆರೆ ತಾಲೂಕಿನಲ್ಲಿ ವಿವಿಧ ವಿದ್ಯುತ್ ಮಾರ್ಗಗಳಲ್ಲಿ ತುರ್ತು ಕಾಮಗಾರಿ ಕೈಗೊಳ್ಳುವುದರಿಂದ ಡಿ.28 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಮಾಮಾಸ್ ಜಾಯಿಂಟ್ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಶಾಮನೂರು ರಸ್ತೆ, ಎಸ್.ಎಸ್. ಲೇಔಟ್, ಎ ಬ್ಲಾಕ್, ಕುವೆಂಪು ನಗರ, ಬಾಟ್ಲಿ ಬಿಲ್ಡಿಂಗ್ ಸುತ್ತ ಮುತ್ತ, ಸಿದ್ದವೀರಪ್ಪ ಬಡಾವಣೆ, 1ನೇ ಅಡ್ಡ ರಸ್ತೆ ಯಿಂದ 7ನೇ ಅಡ್ಡರಸ್ತೆವರೆಗೆ, ಗ್ಲಾಸ್ ಹೌಸ್, ಬಾಪೂಜಿ ಬ್ಯಾಂಕ್ ಸಮುದಾಯ ಭವನದ ಹಿಂಭಾಗದ ಪ್ರದೇಶ , ಬಿ.ಐ.ಇ.ಟಿ. ಕಾಲೇಜು ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಬಿನ್ನಿ ಕಂಪನಿ ರಸ್ತೆ, ಎಮ್ ಜಿ ರಸ್ತೆ, ಎನ್ ಆರ್ ರಸ್ತೆ, ಬೆಲ್ಲೂಡಿಹಳ್ಳಿ, ಮಹಾವೀರ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಮಂಡಕ್ಕಿ ಬಟ್ಟಿ, 1 ರಿಂದ 10 ನೇ ಕ್ರಾಸ್, ಇಂದಿರಾ ನಗರ, ಸಿದ್ದರಾಮೇಶ್ವರ ಬಡಾವಣೆ, ಕಾರ್ಲ್‌ಮಾರ್ಸ್ ನಗರ, ಕೋಳಿ ಚನ್ನಪ್ಪ ಬಡಾವಣೆ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಹೆಚ್.ಕೆ.ಆರ್. ಸರ್ಕಲ್, ಕೆ.ಇ.ಬಿ ಕಾಲೋನಿ, ನಿಟುವಳ್ಳಿ ಹಾಗು ನಿಟುವಳ್ಳಿ ಹೊಸ ಬಡಾವಣೆ, ಮೌನೇಶ್ವರ ಬಡಾವಣೆ, ಸೈಯದ್‌ಪೀರ್ ಬಡಾವಣೆ, ಐ.ಟಿ.ಐ. ರಿಂಗ್ ರಸ್ತೆ, ಜಯನಗರ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, ಎಸ್.ಎಸ್. ಹೈಟೆಕ್ ಆಸ್ಪತ್ರೆ ರಸ್ತೆ, ಭಗೀರಥ ಸರ್ಕಲ್, ಕಾಳಿಕಾಂಬ ದೇವಸ್ಥಾನ, ಶಕ್ತಿನಗರ, ಹಾಗೂ ಇ.ಎಸ್.ಐ ಆಸ್ಪತ್ರೆ ಮತ್ತು ಸುತ್ತಮುತ್ತಲಿನ ಪ್ರದೇಶಗಳು, ಪಿ.ಬಿ. ರಸ್ತೆ., ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಶ್ರೀ ಮುರಘ ರಾಜೇಂದ್ರ ಸ್ವಾಮಿಗಳ ಮಠ, ಜಾಧವ್ ಕ್ಲಿನಿಕ್ ಸುತ್ತಮುತ್ತ , ಶಿವಪ್ಪ ವೃತ್ತದಿಂದ ಜಯದೇವ ವೃತ್ತದವರೆಗೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಪೊಲೀಸ್ ಕ್ವಾಟ್ರಸ್, ತುಂಗ, ಭದ್ರ, ಸರಸ್ವತಿ, ಕೃಷ್ಣ ಬ್ಲಾಕ್, ಅರುಣಾ ಸರ್ಕಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಎಂ.ಸಿ.ಸಿ. ಎ ಬ್ಲಾಕ್, ನ್ಯಾಯಾಧೀಶರ ವಸತಿ ಗೃಹಗಳು, ತೊಗಟವೀರ ಕಲ್ಯಾಣ ಮಂಟಪ, ವಿನೋಬ ನಗರ 1ನೇ ಮುಖ್ಯ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಎಸ್.ಎಸ್. ಬಡಾವಣೆ ಎ ಬ್ಲಾಕ್, ಹನುಮನಹಳ್ಳಿ, ಕೊಗ್ಗನೂರು, ಹನುಮನಹಳ್ಳಿ, ಆನಗೋಡು, ಹೆಬ್ಬಾಳು, ನೀರ್ಥಡಿ, ಶಿವಪುರ, ಹಾಲುವರ್ತಿ, ಗಂಗನಕಟ್ಟೆ, ನೇರ್ಲಿಗಿ, ಚಿನ್ನಸಮುದ್ರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಮತ್ತು ಆರಾಧ್ಯಾ ಕೈಗಾರಿಕೆ ಅರುಣಾ ಸರ್ಕಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಎಂ.ಸಿ.ಸಿ. ಎ ಬ್ಲಾಕ್, ನ್ಯಾಯಾಧೀಶರ ವಸತಿ ಗೃಹಗಳು, ತೊಗಟವೀರ ಕಲ್ಯಾಣ ಮಂದಿರ, ವಿನೋಬ ನಗರ 1ನೇ ಮುಖ್ಯ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು.: ಎಸ್.ಎಸ್. ಬಡಾವಣೆ, ಎ ಬ್ಲಾಕ್, ಶಾಂತಿನಗರ, ಕುಂದುವಾಡ ರಸ್ತೆ, ಮಹಾನಗರ ಪಾಲಿಕೆ ಕುಡಿಯುವ ನೀರಿನ ಸ್ಥಾವರ, ಬಸವೇಶ್ವರ ಬಡಾವಣೆ, ಮಹಾಲಕ್ಷ್ಮೀ ಬಡಾವಣೆ, ಬಾಲಾಜಿ ನಗರ, ಕುಂದುವಾಡ ಕೆರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.ಪಿ.ಬಿರೋಡ್,ರಿಲಯನ್ಸ್‌ಮಾರ್ಕೆಟ್, ಸುಲ್ತಾನ್ ಡೈಮೆಂಡ್ಸ್, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ನಿಟುವಳ್ಳಿ ಹಾಗೂ ನಿಟುವಳ್ಳಿ ಹೊಸ ಬಡಾವಣೆ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, 60 ಅಡಿ ರಸ್ತೆ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

# ಡಿ.29 ರಂದು ಗೆಜೆಟೆಡ್ ಪ್ರೊಬೆಷನರ್ ಗ್ರೂಪ್ ಹುದ್ದೆಗಳ ಮರು ಪರೀಕ್ಷೆ, 19 ಕೇಂದ್ರಗಳಲ್ಲಿ 8395 ಅಭ್ಯರ್ಥಿಗಳು

» ದಾವಣಗೆರೆ

ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುವ 2023-24 ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ ಗ್ರೂಪ್‌ನ 'ಎ' ಮತ್ತು 'ಬಿ' ವೃಂದದ ಹುದ್ದೆಗಳ ಪೂರ್ವಭಾವಿ ಮರು ಪರೀಕ್ಷೆ ಡಿ.29 ರಂದು ನಡೆಯಲಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ.ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗೆಜೆಟೆಡ್ ಪ್ರೊಬೆಷನರ್ ಗ್ರೂಪ್ 'ಎ' ಮತ್ತು 'ಬಿ' ವೃಂದದ ಹುದ್ದೆಗಳ ಪೂರ್ವಭಾವಿ ಮರು ಪರೀಕ್ಷೆಯ ಸಿದ್ದತಾ ಸಭೆ ಹಾಗೂ ಪರೀಕ್ಷಾ ಕೇಂದ್ರಗಳ ಪರಿವೀಕ್ಷಕರು, ಮಾರ್ಗಾಧಿಕಾರಿಗಳುಮತ್ತುವೀಕ್ಷಕರುಗಳಿಗೆ ಏರ್ಪಡಿಸಿದ ಸಭೆಯಲ್ಲಿ ಮಾತನಾಡಿದರು. ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ಮತ್ತು ಯಾವುದೇ ದೂರುಗಳು ಬಾರದಂತೆ ನಡೆಸಲು ಆಯೋಗದ ನಿರ್ದೇಶನಗಳನ್ನು ಪಾಲಿಸಿ, ಪರೀಕ್ಷಾ ಕೇಂದ್ರಗಳಲ್ಲಿ ಸ್ವಚ್ಛತೆ, ಆಸನದ ವ್ಯವಸ್ಥೆ, ಬಂದೋಬಸ್ತ್ ವ್ಯವಸ್ಥೆ ಸೇರಿದಂತೆ ಎಲ್ಲ ಸಿದ್ದತೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ತಿಳಿಸಿದರು.



ಡಿ.29 ರಂದು ನಗರದ 19 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು ಒಟ್ಟು 8395 ಅಭ್ಯರ್ಥಿಗಳು ಪರೀಕ್ಷೆ ಬರೆಯುವರು. ಪತ್ರಿಕೆ-1 ಬೆಳಿಗ್ಗೆ 10 ರಿಂದ 12 ಗಂಟೆಯವರೆಗೆ ಪತ್ರಿಕೆ-2 ಮಧ್ಯಾಹ್ನ 2 ರಿಂದ ಸಂಜೆ 4 ಗಂಟೆಯವರೆಗೆ ಈ ಎರಡು ಪತ್ರಿಕೆಯ ಪರೀಕ್ಷೆಗಳು ನಡೆಯಲಿವೆ ಎಂದು ತಿಳಿಸಿದರು.

ವಸ್ತ್ರ ಸಂಹಿತೆ ನಿಷೇಧಿತ ವಸ್ತುಗಳ ಪಟ್ಟಿ: ಪರೀಕ್ಷೆ ಬರೆಯುವ ಅಭ್ಯರ್ಥಿಗಳು ಉದ್ದ ತೋಳಿನ ಉಡುಪು ಧರಿಸುವಂತಿಲ್ಲ. ಅರ್ಧ ತೋಳಿನ ಶರ್ಟ್‌ಗಳನ್ನು ಧರಿಸುವುದು. ಹೆಣ್ಣು ಮಕ್ಕಳು ಮಂಗಳಸೂತ್ರ ಹಾಗೂ ಕಾಲುಂಗುರ ಹೊರತುಪಡಿಸಿ ಬೇರೆ ಆಭರಣಗಳನ್ನು ಧರಿಸುವಂತಿಲ್ಲ.

ಪರೀಕ್ಷಾ ಕೇಂದ್ರಕ್ಕೆ ಯಾವುದೇ ನಿಷೇಧಿತ ಎಲೆಕ್ಟ್ರಾನಿಕ್ ವಸ್ತುಗಳು, ಮೊಬೈಲ್ ಪೋನ್‌ಗಳು, ಪೆನ್‌ಡ್ರೈವ್‌ಗಳು, ಇಯರ್ ಪೋನ್‌ಗಳು, ಮೈಕ್ರೋ ಪೋನ್‌ಗಳು, ಬ್ಲೂಟೂಥ್ ಸಾಧನಗಳು ಮತ್ತು ಕೈ ಗಡಿಯಾರಗಳನ್ನು ಪರೀಕ್ಷಾ ಕೊಠಡಿಯೊಳಗೆ ಅನುಮತಿಸಲಾಗುವುದಿಲ್ಲ. ಕುಡಿಯುವ ನೀರಿನ ಬಾಟಲಿಗೂ ಸಹ ಅನುಮತಿ ಇರುವುದಿಲ್ಲ, ಪರೀಕ್ಷಾ ಕೇಂದ್ರದಲ್ಲಿಯೇ ಕುಡಿಯುವ ನೀರಿಗೆ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು. ಪೆನ್ಸಿಲ್, ಪೇಪರ್, ಎರೇಸರ್, ಜಾಮಿಟ್ರಿ ಬಾಕ್ಸ್‌ಗಳು ಮತ್ತು ಲಾಗ್ ಟೇಬಲ್ ಗಳನ್ನು ಪರೀಕ್ಷಾ ಕೇಂದ್ರದೊಳಗೆ ತರುವಂತಿಲ್ಲ. ತಲೆಯ ಮೇಲೆ ಟೋಪಿ ಧರಿಸಿಬಾರದು. ಯಾವುದೇ ರೀತಿಯ ಮಾಸ್ಕನ್ನು ಧರಿಸುವಂತಿಲ್ಲ. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾರ್ಥಿಗಳ ತಪಾಸಣಾ ಕಾರ್ಯಕ್ಕೆ ಪೊಲೀಸ್ ಸಿಬ್ಬಂದಿ ನಿಯೋಜಿಸಿ. ಪ್ರತಿ ಪರೀಕ್ಷಾಕೇಂದ್ರಕ್ಕೆಪೊಲೀಸ್ ಬಂದೋಬಸ್ ವ್ಯವಸ್ಥೆ ಇರುತ್ತದೆ ಎಂದು ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಮಂಜುನಾಥ್, ಶಾಲಾ ಶಿಕ್ಷಣ ಇಲಾಖೆ ಡಿಡಿಪಿಐ ಕೊಟ್ರೇಶ್.ಜಿ, ಶಿಕ್ಷಣಾಧಿಕಾರಿ ರಾಜಶೇಖರ್ ಹಾಗೂ ವಿವಿಧ ಕಾಲೇಜುಗಳ ಪ್ರಾಂಶುಪಾಲರು ಉಪಸ್ಥಿತರಿದ್ದರು.

## ಸಂಸ್ಕಾರ ಕಲಿತ ಮಕ್ಕಳಿಂದ ಸಮಾಜ ಕೆಡುಸುವುದಿಲ್ಲ

» ಹೊಸದುರ್ಗ

ಯುವಕ ಯುವತಿಯರು ಮನೆಯಿಂದ ಹಾಗೂ ಗ್ರಾಮದಿಂದ ಒಳ್ಳೆಯ ಸಂಸ್ಕಾರ ಸಂಸ್ಕೃತಿ ಕಲಿಯುತ್ತಾರೋ ಅವರು ಯಾವತ್ತಿಗೂ ಸಮಾಜಘಾತುಕ ಕೆಲಸಗಳನ್ನು ಮಾಡುವುದಿಲ್ಲ ಸಂಸ್ಕಾರ ಮತ್ತು ಸಂಸ್ಕೃತಿ ಕಲಿತ ಮಕ್ಕಳಿಂದ ಸಮಾಜ ಕೆಡುವುದಿಲ್ಲ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಸಂಸ್ಥೆಯ ಯೋಜನಾಧಿಕಾರಿ ಎನ್.ಶಿವಣ್ಣ ತಿಳಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ವತಿಯಿಂದ ತಾಲೂಕಿನ ಕಲ್ಕೆರೆ ಗ್ರಾಮದಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಸಹಾಯಧನವಾಗಿ ಕಾರೇಹಳ್ಳಿ ಶ್ರೀ ಬೀರಲಿಂಗೇಶ್ವರ ದೇವಸ್ಥಾನಕ್ಕೆ 150000 ಲಕ್ಷ ಮತ್ತು ಮತ್ತೂರು ಹರಿಹರೇಶ್ವರ ದೇವಸ್ಥಾನಕ್ಕೆ 1.5. ಲಕ್ಷ ಒಟ್ಟು 3 ಲಕ್ಷ ಡಿ.ಡಿ.ಯನ್ನು ವಿತರಿಸಿ ಮಾತನಾಡಿದರು.

ಟಿ.ಎ.ಪಿ.ಎಂ.ಎಸ್ ಅಧ್ಯಕ್ಷ ಕಾರೇಹಳ್ಳಿ ಬಸವರಾಜ್ ಮಾತನಾಡಿ ಗಾಂಧೀಜಿಯವರ




ಆಶಯ ಒಂದು ಊರಿನಲ್ಲಿ ಒಂದು ಶಾಲೆ, ಒಂದು ಸಹಕಾರ ಸಂಘ, ಒಂದು ಗ್ರಾಮ ಪಂಚಾಯಿತಿ ಇರಬೇಕು ಇದನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನನಸು ಮಾಡುತ್ತಿದೆ. ಇವರು ಮಾಡುವ ಒಳ್ಳೆಯ ಕೆಲಸಗಳು ಸಮಾಜಕ್ಕೆ ಮಾದರಿ ಎಂದು ತಿಳಸಿದರು.

ಈ ಸಂಧರ್ಬದಲ್ಲಿ ಜಿಲ್ಲಾ ಜನಜಾಗೃತಿ ಸದಸ್ಯರು ಬೋರೇಶ್,ಶಿಲ್ಪಾ, ರಾಜೇಂದ್ರ ಪ್ರಸಾದ್ ಯುವ ಮುಖಂಡರು ಲಂಬಾಣಿಹಟ್ಟಿ, ಶಿಲ್ಪಾ ,ಲತಾ, ಭವ್ಯ, ಶೋಭಾ ಹಾಜರಿದ್ದರು.

## ಹೊಳಲ್ಕೆರೆ ರಸ್ತೆಯ ಕನಕ ವೃತ್ತದಲ್ಲಿ ನಂದಿನಿ ಮಿಲ್ಕ್ ಪಾರ್ಲರ್ ಉದ್ಘಾಟನೆ



» ಚಿತ್ರದುರ್ಗ

ತಾಜಾ ಹಾಗೂ ಗುಣಮಟ್ಟದ ನಂದಿನಿ ಉತ್ಪನ್ನಗಳನ್ನು ಗ್ರಾಹಕರಿಗೆ ಒದಗಿಸುವುದು ಶಿಮುಲ್ ಉದ್ದೇಶ ಎಂದು ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ಉದ್ದೇಶ ಎಂದು ನಿರ್ದೇಶಕ ಜಿ.ಬಿ.ಶೇಖರ್ ತಿಳಿಸಿದರು. ಹೊಳಲ್ಕೆರೆ ರಸ್ತೆಯಲ್ಲಿರುವ ಕನಕ ವೃತ್ತ ಹಾಗೂ ಕೆಳಗೋಟೆಯಲ್ಲಿ ನಂದಿನಿ ಪ್ರಾಂಚೆಸ್ಸಿ ಮಿಲ್ಕ್ ಪಾರ್ಲರ್‌ಗಳನ್ನು ಗುರುವಾರ ಉದ್ಘಾಟಿಸಿ ಮಾತನಾಡಿದರು.ಶಿಮುಲ್‌ನಿಂದ ಹಾಲು, ಮೊಸರು, ಮಜ್ಜಿಗೆ, ಲಸ್ಸಿ, ತುಪ್ಪ, ನೂರ ಐವತ್ತಕ್ಕೂ ಹೆಚ್ಚು ಬಗೆಯ ಸಿಹಿ ತಿನಿಸುಗಳು ದೊರೆಯುತ್ತದೆ. ಮುಂದಿನ ದಿನಗಳಲ್ಲಿ ಇಲ್ಲಿ ಇಡ್ಲಿ ದೋಸೆ ಹಿಟ್ಟು ಕೂಡ ಲಭ್ಯವಾಗಲಿದೆ. ಗ್ರಾಹಕರು ಇದರ ಪ್ರಯೋಜನ ಪಡೆದುಕೊಳ್ಳಬಹುದೆಂದು ವಿನಂತಿಸಿದರು.ಶಿಮುಲ್‌ನ ವ್ಯವಸ್ಥಾಪಕ ನಿರ್ದೇಶಕ ಎಸ್.ಜಿ.ಶೇಖರ್ ಮಾತನಾಡಿ ಗ್ರಾಮೀಣ ಭಾಗಗಳಲ್ಲಿ ಸಹಕಾರ ಸಂಘಗಳ ಮೂಲಕ ರೈತರಿಂದ ಹಾಲು ಸಂಗ್ರಹಿಸಿ ವೈಜ್ಞಾನಿಕವಾಗಿ ಸಂಸ್ಕರಿಸಿ ಉತ್ತಮ ಗುಣಮಟ್ಟದ ನಂದಿನಿ ಉತ್ಪನ್ನಗಳನ್ನು ತಯಾರಿಸಲಾಗುವುದು. ಬಾಯಲ್ಲಿ ನೀರೂರಿಸುವ ಪೇಡ, ಬ್ರೆಡ್, ಬನ್ಸ್, ಐಸ್‌ಕ್ರೀಂ, ಪನ್ನೀರ್, ಕೋವ, ಹೀಗೆ ನೂರಕ್ಕೂ ಹೆಚ್ಚು ಬಗೆಯ ತಿನಿಸುಗಳು ಲಭ್ಯವಿದೆ. ನಂದಿನ ಪ್ರಾಂಚೆಸ್ಸಿ ಪಾರ್ಲರ್‌ಗಳಲ್ಲಿ ತಾಜಾ ಉತ್ಪನ್ನಗಳು ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ಲಭ್ಯವಾಗಲಿ ಎನ್ನುವುದು ಶಿಮುಲ್ ಉದ್ದೇಶ ಎಂದು ಹೇಳಿದರು. ಶಿಮುಲ್ ನಿರ್ದೇಶಕ ಜಿ.ಪಿ.ರೇವಣಸಿದ್ದಪ್ಪ, ಚಿತ್ರದುರ್ಗ ಮಾರ್ಕೆಟಿಂಗ್ ಉಸ್ತುವಾರಿ ಅಧಿಕಾರಿ ಹನುಮಂತಪ್ಪ, ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಕೆ.ಆರ್.ಮಂಜುನಾಥ್, ನಂದಿನಿ ಪಾರ್ಲರ್ ಮಾಲೀಕ ಆರ್.ವೆಂಕಟೇಶ್ ಇನ್ನು ಅನೇಕರು ಈ ಸಂದರ್ಭದಲ್ಲಿದ್ದರು.

## ಹೊಳಲ್ಕೆರೆ ಪಟ್ಟಣದ ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರ: ಸಂಸದ

» ಮೊದಲ ಪುಟದಿಂದ

ಹೊಳಲ್ಕೆರೆಯ ಪುರಸಭೆಯ ವ್ಯಾಪ್ತಿಯಲ್ಲಿರುವ ಶಿವಲಿಂಗಪ್ಪ ಬಡಾವಣೆ, ಡಾ.ಬಿ.ಆರ್. ಅಂಬೇಡ್ಕರ್ ಬಡಾವಣೆಯ ಹಕ್ಕು ಪತ್ರ ಪಡೆದಿರುವ ಫಲಾನುಭವಿಗಳ ಹೆಸರಿಗೆ ಈ ಖಾತೆ ನೊಂದಾಯಿಸಿ ಪುರಸಭೆ ಯಿಂದ ಇಂದು ವಿತರಣೆ ಮಾಡಲಾಗುತ್ತಿದೆ. ಈ ಬಡಾವಣೆ ಅಭಿವೃದ್ಧಿಗೆ ಬೇಕಾದ ಚರಂಡಿ, ರಸ್ತೆ, ವಿದ್ಯುತ್, ಕುಡಿಯುವ ನೀರಿನ ಸೌಲಭ್ಯ ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸಿಕೊಡಬೇಕು. ಪ್ರತಿಯೊಬ್ಬ ಫಲಾನುಭವಿಗಳು ಸರ್ಕಾರಿ ಸೌಲಭ್ಯವನ್ನು ಪಡೆದು ನೆಮ್ಮದಿಯಾಗಿ ಬದುಕು ಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರು.ಪುರಸಭೆಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಎಲ್ಲಾ ಸದಸ್ಯರು ಪಟ್ಟಣದ ಸರ್ವಾಂಗೀಣ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ಸಿದ್ಧತೆ ನಡೆಸಿದ್ದಾರೆ. ಪುರಸಭೆ ಕೈಗೊಳ್ಳುವ ಎಲ್ಲಾ ಅಭಿವೃದ್ಧಿ ಯೋಜನೆಗಳಿಗೆ ನಾನುಸಹಕೈಜೋಡಿಸಿಸರ್ಕಾರದಿಂದಬರುವಂತ ಎಲ್ಲಾ ಅನುದಾನವನ್ನು ಹೊಳಲ್ಕೆರೆ ಪುರಸಭೆಗೆ ಬಿಡುಗಡೆ ಮಾಡಿಸಿಕೊಡಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ತಿಳಿಸಿದರು.ಪುರಸಭೆಯ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್ ಮಾತನಾಡಿ, ಕಳೆದ 15 ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ನಿವೇಶನಗಳ ಈ ಖಾತೆ ನೋಂದಣಿ ಪ್ರಕ್ರಿಯೆಯನ್ನು ನಾವು ಅಧಿಕಾರಕ್ಕೆ ಬಂದ 15 ದಿನಗಳಲ್ಲಿ ಪೂರ್ಣಗೊಳಿಸಿದೆ. ಯರೊಬ್ಬರು ನಿವೇಶನಗಳ ಈ ಖಾತೆ ಪಡೆಯಲು ಕಚೇರಿ ಅಲೆದಾಡುವ ಪ್ರಸಂಗ ತಪ್ಪಿಸಲು ಫಲಾನುಭವಿಗಳಿಗೆ ಈ ಖಾತೆಯನ್ನು ವಿತರಣೆ ಮಾಡಲು ಮುಂದಾಗಿದ್ದೇವೆ.

ಈಗಾಗಲೇ ನಿವೇಶನಗಳನ್ನ ಗುರುತಿಸಿ ಇಂದು ಈ ಖಾತೆಯನ್ನು ಫಲಾನುಭವಿಗಳಿಗೆ ವಿತರಿಸಿದೆ. ಮುಂದಿನ ದಿನಗಳಲ್ಲಿ ವಸತಿ ಯೋಜನೆ ಮೂಲಕ ಮನೆ ನಿರ್ಮಾಣ ಮಾಡಿಕೊಡಲು ಯೋಜನೆ ಸಿದ್ಧಪಡಿಸಿ, ಸರ್ಕಾರಕ್ಕೆ ಸಲ್ಲಿಸಿ ಪ್ರತಿಯೊಬ್ಬರಿಗೂ ಸೂರು ಕಲ್ಪಿಸಿಕೊಡಲು ಪುರಸಭೆ ಎಲ್ಲಾ ಸದಸ್ಯರು ಶ್ರಮಿಸಲಿದ್ದಾರೆಂದು ಭರವಸೆ ನೀಡಿದರು.

ಉಪಾಧ್ಯಕ್ಷ ಎಚ್.ಆರ್.ನಾಗರತ್ನ , ಸದಸ್ಯರಾದ ಪಿ. ಆರ್.ಮಲ್ಲಿಕಾರ್ಜುನ, ಡಿ.ಎಸ್.ವಿಜಯ, ಕೆ.ಸಿ.ರಮೇಶ್, ಬಿ.ಎಸ್.ರುದ್ರಪ್ಪ ಪಿ.ಎಚ್. ಮುರುಗೇಶ್, ಆರ್.ಎ.ಅಶೋಕ್‌ವ, ಸೈಯದ್ ಸಜಿಲ್, ಮನ್ಸೂರ್ ಮಮತಾ ಜಯಸಿಂಹ ಖಾಟ್ರೋತ್, ಸವಿತಾನರಸಿಂಹ ಖಾಟ್ರೋತ್, ಸಬಿನ ಆಶ್ರಫ್, ಪೂರ್ಣಿಮಾಬಸವರಾಜು, ಸುಧಾಬಸವರಾಜು, ವಸಂತರಾಜು, ನಾಮ ನಿರ್ದೇಶಕ ಸದಸ್ಯರಾದ ಬಸವರಾಜ, ಮಂಜುನಾಥ್, ಮೊಜರ್ ಉಲ್ಲಾ ಖಾನ್, ಮುಖ್ಯಾಧಿಕಾರಿ ರೇಣುಕಾ ದೇಸಾಯಿ ಇದ್ದರು.

## ಪ್ರಮುಖ ಸುದ್ದಿ

# ಛಲವಾದಿ ನಾರಾಯಣಸ್ವಾಮಿ ಹೇಳಿಕೆಗೆ ಕೊರಚ ಸಮುದಾಯ ಖಂಡನೆ

» ಚಿತ್ರದುರ್ಗ

ಅಲೆಮಾರಿ ಪಟ್ಟಿಯಿಂದ ಕೊರಚರನ್ನು ಹೊರಗಿಡುವ ಛಲವಾದಿ ನಾರಾಯಣಸ್ವಾಮಿ ಹೇಳಿಕೆಗೆ ಖಂಡಿಸಿ ಅವರ ರಾಜೀನಾಮೆಗೆ ಅಖಿಲ ಕರ್ನಾಟಕ ಕೊರಚ ಸಮುದಾಯ ಸಂಘಟನೆಗಳ ಆಗ್ರಹ ಪಡಿಸಿದೆ.

ಚಿತ್ರದುರ್ಗದಲ್ಲಿ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೊರಚ ಮಹಾ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ವೈ.ಕುಮಾರ್ ಕಳೆದ ವಾರ ಬೆಳಗಾವಿ ಸುವರ್ಣಸೌಧದಲ್ಲಿ ಕಲಾಪ ನಡೆಯುವ ವೇಳೆ ಸುವರ್ಣ ಸೌಧದ ಹೊರಗಡೆ ಪ್ರತಿಭಟನೆ ನಡೆಸುತ್ತಿದ್ದ ಅಲೆಮಾರಿ ಸಂಘಟನೆಯೊಂದರ ಮನವಿ ಸ್ವೀಕರಿಸಿ ಮಾತನಾಡಿದ ಛಲವಾದಿ ನಾರಾಯಣ ಸ್ವಾಮಿ 'ಕೊರಚ, ಕೊರಮರು ಪರಿಶಿಷ್ಟ ಅಲೆಮಾರಿ ಪಟ್ಟಿ (49ರಲ್ಲಿ) ಬರುವುದಿಲ್ಲ. ಮಾತ್ರವಲ್ಲ ಪರಿಶಿಷ್ಟ ಜಾತಿ ಒಳಮೀಸಲಾತಿ ಪಟ್ಟಿಗೂ ಅವರು ಸೇರುವುದಿಲ್ಲ ಎಂಬ ಹೇಳಿಕೆ ನೀಡಿರುವುದು ಅತ್ಯಂತ ಖಂಡನೀಯ. ಯಾವುದೇ ಆಧಾರವಿಲ್ಲದ ಈ ರೀತಿ ಹೇಳಿಕೆ ನೀಡಿ, ಅಲೆಮಾರಿ ಸಮುದಾಯಗಳ ನಡುವೆ ಜಗಳ ಹಚ್ಚುವ ಕೆಲಸ ಮಾಡಿರುವ ನಾರಾಯಣ ಸ್ವಾಮಿ ಕೂಡಲೇ ತನ್ನ ಹೇಳಿಕೆಯನ್ನು ಹಿಂತೆಗೆದುಕೊಂಡು ಸಮಾಜದ ಕ್ಷಮೆ ಕೇಳಬೇಕು. ಕೊರಚ ಕೊರಮ ಸಮುದಾಯದ ಸಂಘಟನೆಗಳು




ನಾರಾಯಣ ಸ್ವಾಮಿ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆಗೆ ಕರೆ ನೀಡಲಿದ್ದೇವೆ ಎಂದು ಎಚ್ಚರಿಸಿದ್ದಾರೆ.

ಕೊರಚ ಸಮುದಾಯ ತಲತಲಾಂತರಿದಿಂದ 'ಕಳ್ಳರು' ಎಂಬ ಹಣೆಪಟ್ಟಿಯನ್ನು ಕಟ್ಟಿಕೊಂಡು ಬದುಕುತ್ತಿದೆ. ಬ್ರಿಟಿಷರ ಆಗಮನದ ಬಳಿಕ ಅವರು ತಂದ ರಸ್ತೆ ಸಾರಿಗೆ ಕೊರಚರ ಜೀವನಧಾರವಾಗಿದ್ದ ಎತ್ತುಗಳ ಮೂಲಕ ಸರಕುಸಾಗಣೆ ವೃತ್ತಿಗೆ ಏಟು ಬಿತ್ತು. ಆಗ ಕೊರಚರು ಹೊಟ್ಟೆಪಾಡಿಗಾಗಿ ಆಹಾರಧಾನ್ಯ ಕಳ್ಳತನಕ್ಕೆ ಇಳಿದರು ಎಂದು ಚರಿತ್ರೆ ಹೇಳುತ್ತದೆ. ಅದನ್ನೇ ದೊಡ್ಡದು ಮಾಡಿದ ಬ್ರಿಟಿಷರು ಕಿಮಿನಲ್ ಟ್ರೈಬಲ್ ಕಾಯ್ದೆ ಏರಿ ಕೊರಚರು ಶಾಶ್ವತವಾಗಿ ಕಳ್ಳತನದ ಆರೋಪ ಹೊತ್ತು ತಿರುಗುವಂತೆ ಮಾಡಿದರು. ಈ ಕಳಂಕದಿಂದ ಕೊರಚರು ಊರು ಹೊರಗೆ ಗುಡ್ಡಗಾಡು ಪ್ರದೇಶದಲ್ಲಿ ವಾಸಿಸುವಂತಾಯಿತು. ಅವರಿನ್ನೂ ಮುಖ್ಯವಾಹಿನಿಗೆ ಬರದಿರುವುದಕ್ಕೆ ಇದು ಪ್ರಮುಖ ಕಾರಣ, ಅಲೆಮಾರಿಗಳಲ್ಲಿ ಇಂತಹ ಕಳಂಕ ಬೇರೆ ಯಾರಿಗೂ ಇರಲಾರದು.

ಕೊರಚರು ಇಂದಿಗೂ ಹಗ್ಗ ಕಣ್ಣಿ, ಕಸಪೊರಕೆ ಮಾರಾಟ, ಬುಟ್ಟಿ ಹೆಣೆಯುವುದು, ಹಂದಿ ಸಾಕಾಣೆ ಇತ್ಯಾಧಿ ಹೊಟ್ಟೆ ತುಂಬದ ವೃತ್ತಿಯಲ್ಲಿ ಬದುಕು ಸವೆಸುತ್ತಿದ್ದಾರೆ. ಇಂತಹದೊಂದು ಶೋಷಣೆಗೆ ಒಳಗಾಗಿ ಕಡಿಮೆ ಜನಸಂಖ್ಯೆ ಹೊಂದಿರುವ ಸೂಕ್ಷ್ಮ ಸಮುದಾಯ ಮುಂದುವರೆದಿದೆ ಎಂದು ಹೇಳಲು ನಾರಾಯಣ ಸ್ವಾಮಿಯವರಿಗೆ ಹೇಗೆ ಮನಸ್ಸು ಬಂತು ಗೊತ್ತಿಲ್ಲ. ಇದು ದುರುದ್ದೇಶ ಪೂರಿತ ಆರೋಪ ಮಾಡುವುದನ್ನು ಬಿಟ್ಟು ಛಲವಾದಿ ನಾರಾಯಣ ಸ್ವಾಮಿ ಕೊರಚ, ಕೊರಮ ಹಟ್ಟಿಗೆ ಬಂದು ವಾಸ್ತವ್ಯ ವಾಸ್ತವ ಅರಿಯಬೇಕೆಂದು ಆಗ್ರಹಿಸಿದರು.

ಪರಿಶಿಷ್ಟ ಜಾತಿ ಅಲೆಮಾರಿ, ಅರೆಬರೆಯಾಗಿ ಪಡೆಯಲ್ಲಿರುವ ಸಮುದಾಯಗಳು ಯಾರದೋ ಸೌಲತ್ತುಗಳನ್ನು ಇನ್ಯಾರೋ ಕಿತ್ತುಕೊಂಡು ತಿನ್ನುವವನ್ನು ಬಲಾಢ್ಯವಾಗಿಲ್ಲ ಹಾಗೂ ಸಂಘಟಿತ ಶಕ್ತಿಯೂ ಆಗಿಲ್ಲ. ಸಿದ್ದರಾಮಯ್ಯನವರ ಸರ್ಕಾರ ಈ ಕೋಶ ರಚಿಸಿದ ಬಳಿಕ ಸಮುದಾಯದಲ್ಲಿರುವವರು ನಿಧಾನಕ್ಕೆ ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸುವ ಪ್ರಕ್ರಿಯೆ ಆರಂಭವಾಗಿದೆ. ಇಷ್ಟರಲ್ಲೇ ಅಲೆಮಾರಿ ಪಟ್ಟಿಯಲ್ಲಿರುವ ಕೆಲ ಸಮುದಾಯದ ಪುಡಿ ನಾಯಕರು ಇಲ್ಲಸಲ್ಲದ ವಿಚಾರಗಳನ್ನು ತಮ್ಮ ತಲೆಯಲ್ಲಿ ತುಂಬಿಕೊಂಡು ಕೊರಚರು ಮತ್ತು ಕೊರಮದು ಅಲೆಮಾರಿ ಕೋಶದೊಳಗೆ ಮೀಸಲಾತಿ ಕಬಳಿಸುತ್ತಿದ್ದಾರೆ. ಹಾಗಾಗಿ ಆ ಸಮುದಾಯ ಗಳನ್ನು ಅಲೆಮಾರಿ ಕೋಶದಿಂದ ಹೊರಗೆ ಹಾಕಬೇಕೆಂಬ ಆಧಾರವಿಲ್ಲದ ಬೇಡಿಕೆಯನ್ನಿಟ್ಟುಕೊಂಡು ಹೋರಾಟ ಮಾಡುತ್ತಿರುವುದು ದುರದುಷ್ಟಕರ,

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹಿಂದಿನ ಅವಧಿಯಲ್ಲಿ ರಾಜ್ಯದಲ್ಲಿರುವ ಅಲೆಮಾರಿ, ಅರೆಅಲೆಮಾರಿ ಸಮುದಾಯಗಳ ಕುರಿತು ರಾಷ್ಟ್ರೀಯ ಕಾನೂನು ಶಾಲೆ ಮತ್ತು ಸಾಮಾಜಿಕ ಚಿಂತಕರನ್ನೊಂಗೊಂಡ ತಂಡದ ಮೂಲಕ ಅದ್ಯಾಯನ ನಡೆಸಿ ಪರಿಶಿಷ್ಟ ಅಲೆಮಾರಿಗಳ ಪಟ್ಟಿಯಲ್ಲಿ (ಕೊರಚ, ಕೊರಮ ಸಮುದಾಯಗಳು)51ಸಮುದಾಯಗಳಿವೆ. ಆದರೆ, 49 ಸಮುದಾಯಗಳೆಂದು ಸುಳ್ಳು ಮಾಹಿತಿ ನೀಡಿ ಜನರನ್ನು ದಾರಿ ತಪ್ಪಿಸುವ ಕೆಲಸವನ್ನು ಮಾಡಲಾಗುತ್ತಿದೆ. ಇದಕ್ಕೆ ಛಲವಾದಿ ನಾರಾಯಣಸ್ವಾಮಿ ತುಪ್ಪ ಸುರಿದು ದುಡಿಯುವ ಜನರ ನಡುವೆ ವಿಷ ಬೆರೆಸುವ ಕೆಲಸ ಮಾಡುತ್ತಿದ್ದಾರೆ. ಇವರು ಸುಮ್ಮನಿದ್ದರೆ ಸರಿ ಇಲ್ಲದಿದ್ದರೆ, ಹೋದಲ್ಲಿ ಬಂದಲ್ಲಿ ಕೊರಚ ಕೊರಮ ಸಂಘಟನೆಗಳು ಪ್ರತಿಭಟನೆ ಎದುರಿಸಬೇಕಾದಿತು ಎಚ್ಚರಿಕೆ ನೀಡಿದ್ದು ಅಲ್ಲದೇ ನಾರಾಯಣ ಸ್ವಾಮಿ ಭವಿಷ್ಯದಲ್ಲಿ ಎಲ್ಲಿ ಚುನಾವಣೆಗೆ ನಿಲ್ಲುತ್ತಾರೆ. ಆ ಕ್ಷೇತ್ರದಲ್ಲಿ ಸುತ್ತಾಡಿ ಅವರ ವಿರುದ್ಧ ಪ್ರಚಾರ ಹಮ್ಮಿಕೊಳ್ಳಲಾಗುವುದು. ನಮ್ಮ ಜನಾಂಗದ ಸುದ್ದಿಗೆ ಬರದಂತೆ ಬಿಜೆಪಿ ರಾಜ್ಯಾದ್ಯಕ್ಷರು ನಾರಾಯಣಸ್ವಾಮಿಗೆ ಕರೆದು ಬುದ್ದಿ ಹೇಳಬೇಕು. ಇಲ್ಲದ್ದಿದರೆ, ಮುಂಬರುವ ಚುನಾವಣೆಯಲ್ಲಿ ಬಿಜೆಪಿ ವಿರುದ್ಧ ಸಹಾ ಮತದಾನಕ್ಕೆ ಕರೆ ನೀಡಲಾಗುವುದು ಎಂದು ಎಚ್ಚರಿಸಿದ್ದಾರೆ.

ಗೋಷ್ಟಿಯಲ್ಲಿ ರಾಮಣ್ಣ, ಫಕೀರಪ್ಪ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕಾಲುವೇಹಳ್ಳಿ: ಶ್ರೀಬಂಡೆಬಸವೇಶ್ವರಸ್ವಾಮಿ ಕಾರ್ತಿಕೋತ್ಸವ

» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದಲ್ಲಿ ಡಿ.28 ಮತ್ತು 29 ಎರಡು ದಿನಗಳ ಕಾಲ ಪುರಾತನ ಶ್ರೀಬಂಡೆಬಸವೇಶ್ವರಸ್ವಾಮಿ ಕಾರ್ತಿಕೋತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಆಡಳಿ ಮಂಡಳಿ ತಿಳಿಸಿದೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಸಾವಿರಾರು ವರ್ಷಗಳ ಹಿಂದೆ ಈ ಭಾಗದ ಜನರ ಕಷ್ಟವನ್ನು ನಿವಾರಿಸಲು ಬಂದ ಶಿವ ಈ ಗ್ರಾಮದ ಬಂಡೆಯ ಮೇಲೆ ನೆಲೆಸಿದ್ದರಿಂದ ಬಂಡೆಬಸವೇಶ್ವರ ಎಂಬ ಹೆಸರಿನಿಂದ ಈ ಭಾಗದ ಜನರ ಕಷ್ಟಗಳನ್ನು ನಿವಾರಿಸುತ್ತಾ ಬಂದಿದ್ದಾರೆ. ಕರ್ನಾಟಕವಲ್ಲದೆ, ಆಂಧ್ರ ಪ್ರದೇಶಲ್ಲೂ ಈ ದೇವರ ಭಕ್ತರು ಸಹಸ್ರಾರು ಸಂಖ್ಯೆಯಲ್ಲಿ ಇರುವುದು ವಿಶೇಷ. ಡಿ.28ರ ಶನಿವಾರ ಬೆಳಗ್ಗೆ 8.30ಕ್ಕೆ ಗಂಗಾಪೂಜೆಯೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, 10.45ಕ್ಕೆ ಮಹಾರುದ್ರಾಭಿಷೇಕ, ಸಂಜೆ 4.30ಕ್ಕೆ ಅಖಂಡ ಭಜನೆ, ಕೋಲಾಟ, ನಂದಿಧ್ವಜಕುಣಿತ ಮುಂತಾದ ಕಾರ್ಯಕ್ರಮವಿರುತ್ತದೆ. ವಿಶೇಷವಾಗಿ ಅನುರಾಧ ನಕ್ಷತ್ರದಲ್ಲಿ ಗೋದೊಳಿಸಂಜೆ 5ರಿಂದ6 ವೇಳೆಯಲ್ಲಿ ಶ್ರೀಸ್ವಾಮಿಯ ಭವ್ಯರಥೋತ್ಸವ ನಡೆಯಲಿದ್ದು, ಸಾವಿರಾರು ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಡಿ.29ರ ಭಾನುವಾರ ಬೆಳಗ್ಗೆ 8.30ಕ್ಕೆ ಶ್ರೀಸ್ವಾಮಿಯ ಪಲ್ಲಕ್ಕಿ ಉತ್ಸವ, 10.30ಕ್ಕೆ ತೀರ್ಥಪ್ರಸಾದ ವಿನಿಯೋಗದೊಂದಿಗೆ ಕಾರ್ಯಕ್ರಮ ಮುಕ್ತಾಯವಾಗಲಿದೆ.

### ತಿಮ್ಮಪ್ಪದೇವಸ್ಥಾನದಲ್ಲಿ ವೆಂಕಟೇಶ್ವರಸ್ವಾಮಿ ಕಲ್ಯಾಣ, ಕಾರ್ತಿಕ

» ಚಳ್ಳಕೆರೆ

ಗಾಂಧಿನಗರದ ವೆಂಕಟೇಶ್ವರಸ್ವಾಮಿ(ತಿಮ್ಮಪ್ಪ) ದೇವಸ್ಥಾನ ಸೇವಾಭಿವೃದ್ಧಿ ಟ್ರಸ್ಟ್‌ವತಿಯಿಂದ ಡಿ.28ರ ಶನಿವಾರ ಬೆಳಗ್ಗೆ11ರಿಂದ11.40ರಲ್ಲಿ ಸಲ್ಲುವ ಶುಭಮೂರ್ಹತದಲ್ಲಿ ವೆಂಕಟೇಶ್ವರಸ್ವಾಮಿ ಕಲ್ಯಾಣೋತ್ಸವ ಕಾರ್ಯಕ್ರಮ ಹಾಗೂ ಸಂಜೆ 6 ಗಂಟೆಗೆ ಕಾರ್ತಿಕ ಲಕ್ಷದೀಪೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಆಡಳಿತ ಮಂಡಳಿ ತಿಳಿಸಿದೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಅಂದು ಬೆಳಗ್ಗೆ 5 ಗಂಟೆಗೆ ಸುಪ್ರಭಾತದೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, ಕಲ್ಯಾಣೋತ್ಸವ, ಲಕ್ಷದೀಪೋತ್ಸವ ಕಾರ್ಯಕ್ರಮದ ನಂತರ ಆಗಮಿಸಿದ ಎಲ್ಲಾ ಸದ್ಭಕ್ತರಿಗೆ ಅನ್ನಸಂತರ್ಪಣೆ ಕಾರ್ಯಕ್ರಮ ಸಹ ಏರ್ಪಡಿಸಿದೆ. ಜ.10ರ ಶುಕ್ರವಾರ ವೈಕುಂಠ ಏಕಾದಶಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಲೋಕಸಭಾ ಸದಸ್ಯ ಗೋವಿಂದ ಎಂ.ಕಾರಜೋಳ, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಚಿತ್ರದುರ್ಗಶಾಸಕಕೆ.ಸಿ.ವೀರೇಂದ್ರಕಾರ್ಯಕ್ರಮದಲ್ಲಿ ಭಾಗವಹಿಸುವರು. ಖ್ಯಾತ ಪುರೋಹಿತರಾದ ಪ್ರದೀಪಶರ್ಮ ಮತ್ತು ಪ್ರವೀಣಶರ್ಮ ಪೂಜಾ ಕಾರ್ಯಕ್ರಮಗಳನ್ನು ನಡೆಸಿಕೊಡುವರು.

### ರಸ್ತೆ ಮಾರ್ಗ ಬದಲಾವಣೆ

» ಚಿತ್ರದುರ್ಗ

ಕೆ.ಎಂ.ಇ.ಆರ್.ಸಿ ಯೋಜನೆಯಡಿ ಹೊಳಲ್ಕೆರೆ ತಾಲ್ಲೂಕು ಚಿಕ್ಕಜಾಜೂರಿನಿಂದ ಚಿಕ್ಕಂದವಾಡಿ ಮೂಲಕ ಅಮೃತಾಪುರ ಹೋಗುವ 12 ಕಿ.ಮೀ. ರಿಂದ 16.50 ಕಿ.ಮೀ ವರೆಗಿನ ರಸ್ತೆಯನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ಈ ರಸ್ತೆಯ ಕಾಂಕ್ರಿಟ್ ಕಾಮಗಾರಿ ಪ್ರಗತಿಯಲ್ಲಿದ್ದು, ಕ್ಯೂರಿಂಗ್ ಅವಧಿ ಮುಗಿಯುವವರೆಗೂ ಈ ಮಾರ್ಗದಲ್ಲಿ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿದೆ. ಚಿಕ್ಕಂದವಾಡಿ ಮತ್ತು ಅರಸನಘಟ್ಟಗೆ ಹೋಗುವ ವಾಹನಗಳು, ಚಿಕ್ಕಜಾಜೂರು ಗ್ರಾಮದ ಮಾರುಕಟ್ಟೆ ಪ್ರಾಂಗಣದ ಮುಂಭಾಗದಿಂದ ಚನ್ನಪಟ್ಟಣ ಹೋಗುವ ರಸ್ತೆಯನ್ನು ಬಳಸಿಕೊಂಡು ಅಪ್ಪರಸನಹಳ್ಳಿ ಮೂಲಕ ಚಿಕ್ಕಂದವಾಡಿ ಕೆರೆಯ ಸಮೀಪ ಸೇರುವುದು. ಅಲ್ಲಿಂದ ಮುಂದೆ ಅಪ್ಪರಸನಹಳ್ಳಿ ಮೂಲಕ ಅರಸನಘಟ್ಟ ಗ್ರಾಮ ಸೇರಬಹುದು. ಹೊಳಲ್ಕೆರೆ ಪಟ್ಟಣಕ್ಕೆ ಹೋಗುವ ವಾಹನಗಳು ಚಿಕ್ಕಂದನವಾಡಿ ಮತ್ತು ಅರಸನಘಟ್ಟ ಗ್ರಾಮದಿಂದ ಅಪ್ಪರಸನಹಳ್ಳಿ ಹೋಗುವ ರಸ್ತೆಯನ್ನು ಬಳಸಿಕೊಂಡು, ಪಾಡಿಗಟ್ಟೆ ಅಥವಾ ಆಡನೂರು ರಸ್ತೆಯ ಮೂಲಕ ಹೊಳಲ್ಕೆರೆ ಪಟ್ಟಣ ಸೇರಬಹುದು ಎಂದು ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ವಿದ್ಯುತ್ ಪ್ರಸರಣ ಮಾರ್ಗದ ಪರಿವರ್ತನೆ ಕಾರ್ಯದ ಸಂಬಂದ ಡಿ.27 ರಂದು ಭರಮಸಾಗರ ವಿ.ವಿ ಕೇಂದ್ರದಿಂದ ಸರಬರಾಜಾಗುವ ಎಲ್ಲಾ 11 ಕೆ.ವಿ ಮಾರ್ಗಗಳಲ್ಲಿ ವಿದ್ಯುತ್ ಮುಕ್ತತೆಯನ್ನು ನೀಡಲಾಗಿದೆ. ಬೆಳಿಗ್ಗೆ 9.00 ರಿಂದ ಸಂಜೆ 5:00 ಗಂಟೆಯವರೆಗೆ ಕಾಮಗಾರಿ ಜರುಗಲಿದ್ದು, ಈ ಅವಧಿಯಲ್ಲಿ ಭರಮಸಾಗರ ವಿ.ವಿ. ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಹೆಗ್ಗೆರೆ , ಎಮ್ಮೆಹಟ್ಟಿ , ನಲ್ಲಿಕಟ್ಟೆ , ಕೋಳಾಳ್ ಎನ್.ಜೆ.ವೈ , ಹೆಗ್ಗಡೆಹಾಳ್, ವಿಜಾಪುರ , ಶಿವನಕೆರೆ , ನಂದಿಹಳ್ಳಿ , ಬಹದುರ್ ಘಟ್ಟ , ಅಡವಿ ಗೊಲ್ಲರಹಳ್ಳಿ , ಭರಮಸಾಗರ , ಪಮೇರಹಳ್ಳಿ , ಕೋಗುಂಡೆ , ಎಸ್.ಕೆ.ಎಮ್ ಕೈಗಾರಿಕ ಪ್ರದೇಶ, ಕೋಡಿಹಳ್ಳಿ , ಅರಳಕಟ್ಟೆ ಮತ್ತು ಸುತ್ತ ಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಹಿನ್ನೆಲೆಯಲ್ಲಿ ರೂಪಿರುವ 'ಅಸ್ಮಿತೆ' ವ್ಯಾಪಾರ ಮೇಳ-2024

# ಖಾದಿ ಉತ್ಸವ ಮೇಳಕ್ಕೆ ಮುಖ್ಯಮಂತ್ರಿಗಳಿಂದ ಚಾಲನೆ

» ಬೆಳಗಾವಿ





ರಾಷ್ಟ್ರಪಿತ ಮಹಾತ್ಮಗಾಂಧೀಜಿ ಅವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ 1924ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನನದ ಶತಮಾನೋತ್ಸವ ಆಚರಣೆ ಹಿನ್ನೆಲೆಯಲ್ಲಿ ಬೆಳಗಾವಿ ನಗರದಲ್ಲಿ ವಿಶೇಷವಾಗಿ ರೂಪಿಸಿರುವ ಸರಸ್ ಮೇಳ ಮತ್ತು ಖಾದಿ ಉತ್ಸವ,ವಸ್ತುಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ನಗರದ ಸರ್ದಾರ್ ಹೈಸ್ಕೂಲ್ ಮೈದಾನದಲ್ಲಿ ಗುರುವಾರ ವಿದ್ಯುಕ್ ಚಾಲನೆ ನೀಡಿದರು.

ಬೆಳಗ್ಗೆ ನಗರದ ಟಿಳಕವಾಡಿಯಲ್ಲಿನ ವೀರಸೌಧದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಬಳಿಕ ನೇರವಾಗಿ

ಸರ್ದಾರ್ ಹೈಸ್ಕೂಲ್ ಮೈದಾನಕ್ಕೆ ಆಗಮಿಸಿದ ಮುಖ್ಯಮಂತ್ರಿಗಳಿಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹಾಗೂ ಇನ್ನಿತರ ಗಣ್ಯರು ಆತ್ಮೀಯವಾಗಿ ಬರಮಾಡಿಕೊಂಡರು.

ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್, ಶತಮಾನೋತ್ಸವ ಸಮಿತಿಯ ಅಧ್ಯಕ್ಷರು ಹಾಗೂ ಸಚಿವರಾದ ಎಚ್.ಕೆ.ಪಾಟೀಲ್ , ಸಚಿವರಾದ ಡಾ.ಹೆಚ್.ಸಿ.ಮಹಾದೇವಪ್ಪ,

ಕೆ.ಎಚ್.ಮುನಿಯಪ್ಪ, ಲಕ್ಷ್ಮಿ ಹೆಬ್ಬಾಳಕರ, ಎಂ.ಬಿ.ಪಾಟೀಲ, ಡಾ. ಎಂ.ಸಿ.ಸುಧಾಕರ, ದಿನೇಶ್ ಗುಂಡೂರಾವ್, ಭೈರತಿ ಸುರೇಶ, ಶಾಸಕರಾದ ಆರ್ ವಿ ದೇಶಪಾಂಡೆ, ದೆಹಲಿಯ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಮಾಜಿ ಮುಖ್ಯಮಂತ್ರಿಗಳಾದ ಎಂ.ವೀರಪ್ಪ ಮೊಯ್ಲಿ ಸೇರಿದಂತೆ ಹಲವಾರು ಗಣ್ಯರೊಂದಿಗೆ ಮುಖ್ಯಮಂತ್ರಿಗಳು ಬೆಳಗಾವಿ ನಗರದಲ್ಲಿ ಸ್ವ-ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳು ಹಾಗೂ ಖಾದಿ ಉತ್ಪನ್ನಗಳ ಬೃಹತ್ ಪ್ರದರ್ಶನ ಮತ್ತು ಮಾರಾಟ ಮೇಳ 'ಅಸ್ಮಿತೆ' ವ್ಯಾಪಾರ ಮೇಳ-2024ವನ್ನು ಉದ್ಘಾಟಿಸಿದರು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ ಮತ್ತು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಮತ್ತು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಾನಗರ ಪಾಲಿಕೆ ಸಹಭಾಗಿತ್ವದಲ್ಲಿ ಈ ಸರಸ್ ಮೇಳ ಮತ್ತು ಖಾದಿ ಉತ್ಸವವು ಆರಂಭವಾಗಿದ್ದು, ಡಿ.26ರಿಂದ ಜನವರಿ 04ರವರೆಗೆ ನಡೆಯಲಿದೆ.

ಎಲ್ಲಾಜಿಲ್ಲೆಗಳಿಂದಸ್ವ-ಸಹಾಯಗುಂಪಿನ ಮಹಿಳೆಯರು ಭಾಗಿ: ಈ ಕಾರ್ಯಕ್ರಮದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಸ್ವ-ಸಹಾಯ ಗುಂಪಿನ ಮಹಿಳೆಯರು ತಮ್ಮ ತಮ್ಮ ಜಿಲ್ಲೆಯ ಪ್ರಮುಖ ಉತ್ಪನ್ನಗಳೊಂದಿಗೆ ಭಾಗವಹಿಸಿದ್ದು, ಒಟ್ಟು 150 ಮಳಿಗೆಗಳನ್ನು ಸ್ಥಾಪಿಸಲಾಗಿದೆ. ಅದರಲ್ಲಿ 10 ಆಹಾರ ಮೇಳದ ಮಳಿಗೆಗಳು ಮತ್ತು 50 ಖಾದಿ ಉತ್ಪನ್ನಗಳ ಮೇಳಗಳು ಒಳಗೊಂಡಿದೆ. ಈ ಮೇಳಕ್ಕೆ ಸಾರ್ವಜನಿಕರಿಗೆ ಉಚಿತ ಪ್ರವೇಶವಿದ್ದು, ದಿನಾಂಕ:26-12-2024 ರಿಂದ 04.01.2025ರವರೆಗೆ ಪ್ರತಿ ದಿನ ಬೆಳಿಗ್ಗೆ 10.30 ಯಿಂದ ರಾತ್ರಿ 9.30 ರವರೆಗೆ ಪ್ರದರ್ಶನ ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ.

ಪ್ರತಿ ದಿನ ಸಾಂಸ್ಕೃತಿಕ ಕಾರ್ಯಕ್ರಮ: ಪ್ರತಿ ದಿನ ಸಂಜೆ 6.30 ರಿಂದ 9.00 ಗಂಟೆಯವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಬೆಳಗಾವಿಯಲ್ಲಿ ಆಯೋಜಿಸಲಾಗುತ್ತಿರುವ ಸತತ 4ನೇ ವರ್ಷದ ಈ ಮೇಳದಲ್ಲಿ ಪ್ರಮುಖವಾಗಿ ನಗರ ಹಾಗೂ ಗ್ರಾಮೀಣ ಸ್ವ-ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸುವ ಉತ್ಪನ್ನಗಳು ಮಾರಾಟ ಮಾಡುವುದು ವಿಶೇಷತೆಯಾಗಿದೆ.

**ಆಕರ್ಷಣೀಯ ಅಕ್ಕ ಕೆಫೆ:** ಸರ್ಕಾರವು 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿ 50 'ಅಕ್ಕ ಕೆಫೆ'ಗಳನ್ನು ಒಂದೇ ಮಾದರಿ ವಿನ್ಯಾಸದಡಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಅಂದಾಜು 1200 ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ಜೀವನೋಪಾಯಕ್ಕೆ ಅನುಕೂಲ ಕಲ್ಪಿಸಲಾಗುತ್ತಿದೆ. ಮುಂದುವರೆದು, 'ಅಕ್ಕ-ಕಫೆ' ಕಾರ್ಯಕ್ರಮದ ಭಾಗವಾಗಿ ಈ ಮೇಳದ ಮೈದಾನದಲ್ಲಿನ ಆಹಾರ ಕೋರ್ಟ್‌ನ್ನು "ಅಕ್ಕ-ಕೆಫೆ" ಶೀರ್ಷಿಕೆಯಡಿ ಆಕರ್ಷಣೀಯವಾಗಿ ಸಿದ್ದಪಡಿಸಲಾಗಿದೆ.

ಸ್ಥಳದಲ್ಲೇ ಆಹಾರ ತಯಾರಿಕೆ: ಈ ಆಹಾರ ಮಳಿಗೆಗಳಲ್ಲಿ ಉತ್ತರ ಕರ್ನಾಟಕದಲ್ಲಿ ಹೆಸರುವಾಸಿಯಾದ ಗಿರಮಿಟ್/ಚುರುಮರಿ ಮಂಡಕ್ಕಿ, ಜೋಳದ ಖಡಕ್ ರೊಟ್ಟಿ ಸೇರಿದಂತೆ ಹೋಳಿಗೆ, ಮಂಗಳೂರು ನೀರ್‌ದೋಸೆ ಮತ್ತು ಮಾಂಸಹಾರಿ ಆಹಾರಗಳಾದ ಬ್ಯಾಂಬು ಬಿರಿಯಾನಿ ಮುಂತಾದವುಗಳನ್ನು ಸ್ಥಳದಲ್ಲೇ ತಯಾರಿಸಿ ಕೊಡಲಾಗುತ್ತಿದೆ.

**ವಿಶೇಷ ಅಭಿಯಾನ:** ರಾಜ್ಯದಲ್ಲಿ ಅಭಿಯಾನದಡಿ 2.79 ಲಕ್ಷ ಸ್ವ-ಸಹಾಯ ಗುಂಪುಗಳಡಿ 29.66 ಲಕ್ಷ ಕುಟುಂಬಗಳನ್ನು ಗ್ರಾಮೀಣ ಹಾಗೂ ನಗರ ಜೀವನೋಪಾಯ ಅಭಿಯಾನದಡಿ ಹಾಗೂ 45 ಸಾವಿರ ಸ್ವ-ಸಹಾಯ ಗುಂಪುಗಳಡಿ 4.50 ಲಕ್ಷ ಕುಟುಂಬಗಳನ್ನು ಗ್ರಾಮೀಣ ಹಾಗೂ ನಗರ ಜೀವನೋಪಾಯ ಅಭಿಯಾನದಡಿ ಸಂಘಟಿಸಲಾಗಿದ್ದು, ಪ್ರತಿಯೊಬ್ಬ ಮಹಿಳೆಯು ಸ್ವಾವಲಂಬನೆಯ ಬದುಕಿನೊಂದಿಗೆ ತನ್ನ ಕುಟುಂಬದ ಅಭಿವೃದ್ಧಿಗೆ ಪೂರಕ ಸೇವೆಗಳನ್ನು ಪಡೆಯುವಲ್ಲಿ ಪೂರಕ ವ್ಯವಸ್ಥೆಗಳನ್ನು ಕಲ್ಪಿಸಲಾಗುತ್ತಿದೆ.

**ಉತ್ಪನ್ನಗಳಿಗೆ ಮಾರುಕಟ್ಟೆ:** ರಾಜ್ಯದಲ್ಲಿ ಈ ಮಹಿಳೆಯರು ಉತ್ಪನ್ನಗಳ ಮಾರಾಟಕ್ಕೆ ಪ್ರತಿಯೊಂದು ಹಳ್ಳಿ, ಸಂತೆ, ತಾಲ್ಲೂಕು ಮಟ್ಟದಲ್ಲಿ ಮಾಸಿಕ ಸಂತೆ, ಜಿಲ್ಲಾ ವಸ್ತು ಪ್ರದರ್ಶನ ಮಾರಾಟ ಮೇಳ ಏರ್ಪಡಿಸುವುದಷ್ಟೆ ಅಲ್ಲದೆ ಇತರೆ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ನಡೆಯುವ ಮೇಳಗಳಿಗೆ ರಾಜ್ಯದ ಮಹಿಳೆಯರನ್ನು ನಿಯೋಜನೆ ಮಾಡುವ ಮೂಲಕ ಅವರ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಬೆಳಗಾವಿಯಲ್ಲಿ ಕಳೆದ 3 ವರ್ಷದಿಂದ ಬೃಹತ್ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಿದಂತೆ ಈ ವರ್ಷವು ಸಹ ಮೇಳ ಆಯೋಜಿಸಲಾಗಿದೆ ಎಂದು ರಾಷ್ಟ್ರೀಯ ಜೀವನೋಪಾಯ ಅಭಿಯಾನದ ನಿರ್ದೇಶಕಿ ಪಿ.ಐ.ವಿದ್ಯಾ ಅವರು ತಿಳಿಸಿದರು.



ಮಹಾತ್ಮಗಾಂಧಿ ಅವರ ಅಧ್ಯಕ್ಷತೆಯಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವಮತ್ತು ಕಾಂಗ್ರೆಸ್ ಕಾರ್ಯಕಾರಣಿ ಸಭೆಗಾಗಿ ವೀರಸೌಧಕ್ಕೆ ಗಾಂಧಿ ಭಾವಚಿತ್ರದೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ವರಿಷ್ಠರು ಪಾದಯಾತ್ರೆ ಮೂಲಕ ಆಗಮಿಸಿದರು. ಬಳಿಕ ಎ.ಐ.ಸಿ.ಸಿ ಅಧ್ಯಕ್ಷ ಮಲಚಲಿಕಾರ್ಜುನ ಖರ್ಗೆ ಅವರು ಧ್ವಜಾರೋಹಣ ನೆರವೇರಿಸುವ ಮೂಲಕ ಕಾರ್ಯಕಾರಣಿಗೆ ಚಾಲನೆ ನೀಡಿದರು.

## ಡಿ.31 ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಡಿ.31ರ ಮಂಗಳವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ ನಗರದ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಮೂರಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೋಮೋ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು 5 ಬಯೋಡಾಟಾ ಪ್ರತಿ, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ಫೋಟೋಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಸ್ಟೇಡಿಯಂ ತಿರುವು, ಹಳೇ ವೈಶಾಲಿ ಗೇಟ್ ಹತ್ತಿರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 9964528212, 7019755147 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

## ಜ.01ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಜನವರಿ 1ರಂದು ಬೆಳಿಗ್ಗೆ 11ಕ್ಕೆ ನಗರದ ತ.ರಾ.ಸು ರಂಗಮಂದಿರದಲ್ಲಿ "ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ" ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

## ತಾಲ್ಲೂಕು ಕೃಷಿಕ ಸಮಾಜ: ಸದಸ್ಯರು ಹಾಗೂ ಪದಾಧಿಕಾರಿಗಳ ಆಯ್ಕೆ

» ಚಿತ್ರದುರ್ಗ

ಮುಂಬರುವ 5 ವರ್ಷಗಳ ಅವಧಿಗೆ ಚಿತ್ರದುರ್ಗ ತಾಲ್ಲೂಕು ಕೃಷಿಕ ಸಮಾಜಕ್ಕೆ ಪದಾಧಿಕಾರಿಗಳು ಆಯ್ಕೆಯಾಗಿದ್ದಾರೆ.ಡಿ.15ರಂದುಚುನಾವಣೆಯಲ್ಲಿ ಸತೀಶ್, ಪಾರ್ವತಮ್ಮ, ಬಿ.ಟಿ.ಜಗದೀಶ್, ಎಸ್.ಎಲ್.ನಾಗರಾಜು, ಸಿ.ಯೋಗರಾಜ, ಎಂ.ಮಹೇಶ್ವರಪ್ಪ, ಗಂಗಾಧರ, ಕೆ.ಪ್ರಾಣೇಶ್, ಆರ್.ಶಶಿಧರ್, ಮಂಜುಳಮ್ಮ, ಎಂ.ಪರಮೇಶ್, ಎನ್.ಪರಶುರಾಮ್, ಎನ್.ಹನುಮಂತರೆಡ್ಡಿ, ಶಂಭುಲಿಂಗಪ್ಪ.ಸಿ, ಎಂ.ಚನ್ನಬಸಪ್ಪ ಕೃಷಿಕ ಸಮಾಜದ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಡಿ.26 ರಂದು ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಜರುಗಿದ ಹೊಸ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಕೃಷಿಕ ಸಮಾಜದ ಕಾರ್ಯಕಾರಿ ಅಧ್ಯಕ್ಷರಾಗಿ ಬಿ.ಟಿ.ಜಗದೀಶ್, ಉಪಾಧ್ಯಕ್ಷರಾಗಿ ಎಂ.ಸತೀಶ್, ಪ್ರಧಾನ ಕಾರ್ಯದರ್ಶಿಯಾಗಿ ಕೆ.ಪ್ರಾಣೇಶ್, ಖಜಾಂಚಿಯಾಗಿ ಪಟೇಲ್ ಸಿ ಶಂಭುಲಿಂಗ, ಜಿಲ್ಲಾ ಪ್ರತಿನಿಧಿಯಾಗಿ ಆರ್.ಶಶಿಧರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಸಹಾಯಕ ಕೃಷಿ ನಿರ್ದೇಶಕ ಹೆಚ್.ಕೆ.ರಾಮಕೃಷ್ಣ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಶಾಲೆಗೆ ಆಗಮಿಸುವ ಮಕ್ಕಳ ಆರೋಗ್ಯದ ಬಗ್ಗೆ ವಿಶೇಷ ಗಮನಹರಿಸುವುದು ಉತ್ತಮ: ಡಾ.ಸಂಜಯ್‌ಹೊಸಮನೆ

» ಚಳ್ಳಕೆರೆ





ಇತ್ತೀಚಿನ ದಿನಗಳಲ್ಲಿ ಪುಟ್ಟಮಕ್ಕಳಿಗೆ ಅವರಿಗೆ ಅರಿವಿಲ್ಲದಂತೆ ಅನೇಕ ರೋಗಗಳು ವ್ಯಾಪಿಸುವ ಸಂಭವವಿದೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಮುಂಜಾಗ್ರತಾ ಕ್ರಮವಾಗಿ ನೂತನ ವ್ಯಾಕ್ಸಿನನ್ನು ಪರಿಚಯಿಸಿದ್ದು ಇದನ್ನು ಪಡೆದರೆ ಮಕ್ಕಳು ರೋಗದಿಂದ ದೂರವಿರಬಹುದು ಎಂದು ಖ್ಯಾತಮಕ್ಕಳ ತಜ್ಞ ಡಾ.ಸಂಜಯ್‌ಹೊಸಮನೆ ತಿಳಿಸಿದರು.

ಅವರು, ಇಲ್ಲಿನ ತ್ಯಾಗರಾಜನಗರದ ಶೈನ್ ಏರೋಕಿಡ್ಸ್ ಇಂಟರ್‌ನ್ಯಾಷನಲ್ ಸ್ಕೂಲ್‌ನಲ್ಲಿ ಮಕ್ಕಳ ಆರೋಗ್ಯ ತಪಾಸಣಾ ಶಿಬಿರದಲ್ಲಿ ಪಾಲ್ಗೊಂಡು ಮಾತನಾಡಿದರು. ಪುಟ್ಟ ಮಕ್ಕಳ ಆರೋಗ್ಯದ ಬಗ್ಗೆ ಪೋಷಕರು ಹೆಚ್ಚು ಗಮನಹರಿಸಬೇಕು. ಊಟ ಮಾಡುವಾಗ, ತಿಂಡಿತಿನಿಸು ತಿನ್ನುವಾಗ ಸ್ವಚ್ಚವಾಗಿ ಕೈತೊಳೆದು ಊಟ ಮಾಡಬೇಕು. ಶಾಲೆಯಲ್ಲಿ ಮಕ್ಕಳ ಆರೋಗ್ಯದ ಬಗ್ಗೆ ಹೆಚ್ಚು ಗಮನ ನೀಡಬೇಕು. ಬಹುಬೇಗನೇ ಮಕ್ಕಳಿಗೆ ರೋಗಗಳು ವ್ಯಾಪಿಸುವ ಸಂಭವವಿರುವ ಕಾರಣ ಮಕ್ಕಳ ಬಗ್ಗೆ ಹೆಚ್ಚು ಗಮನಹರಿಸಬೇಕು. ಪ್ರಸ್ತುತ ಈ ಶಾಲೆಯ ಎಲ್ಲಾ ಮಕ್ಕಳಿಗೆ ನೂತನ ವ್ಯಾಕ್ಸಿನ್ ಇನ್‌ಫ್ಲ್ಯೂಯಜಾ ಪಡೆಯಲು ಸಲಹೆ ನೀಡಲಾಯಿತು. ಐದು ವರ್ಷ ಮೇಲ್ಪಟ್ಟು ಎಲ್ಲರೂ ಸಹ ಈ ವ್ಯಾಕ್ಸಿನನ್ನು ಪಡೆಯಬಹುದು ಎಂದರು.

ಶಾಲೆಯಮುಖ್ಯಶಿಕ್ಷಕನೂರಿಮಾತನಾಡಿ, ಪ್ರತಿವರ್ಷವೂ ನಮ್ಮ ಶಾಲೆಯ ಮಕ್ಕಳಿಗೆ ತಜ್ಞ ವೈದ್ಯರಿಂದ ಉಚಿತ ತಪಾಸಣಾ ಶಿಬಿರ ನಡೆಸಿ ಏನಾದರೂ ಸಮಸ್ಯೆ ಇದ್ದಲ್ಲಿ ವೈದ್ಯರೇ ಪೋಷಕರಿಗೆ ಮಾರ್ಗದರ್ಶನ ಮಾಡುವರು. ಮಕ್ಕಳ ಆರೋಗ್ಯದ ಮೇಲೆ ಹೆಚ್ಚು ನಿಗಾ ಇಡಲಾಗುವುದು ಎಂದರು. ಸಹ ಶಿಕ್ಷಕರಾದ ಕಲ್ಪನಾ, ಹೀನಾಕೌಸರ್, ಲಕ್ಷ್ಮಿ, ಶಿವಲೀಲಾ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನಿಷೇಧಾಜ್ಞೆ ಜಾರಿ

» ಚಿತ್ರದುರ್ಗ

ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಡಿ.29ರಂದು ನಗರದ 25 ಕೇಂದ್ರಗಳಲ್ಲಿ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ಮರು ಪರೀಕ್ಷೆ ನಡೆಯಲಿದೆ. ಪರೀಕ್ಷಾ ಅವ್ಯವಹಾರಗಳನ್ನು ತಡೆಗಟ್ಟಲು ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀ ಪ್ರದೇಶದಲ್ಲಿ ಸಿ.ಆರ್.ಪಿ.ಸಿ ಕಲಂ 144 ಸೆಕ್ಷನ್ ಅಡಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ಡಿ.29 ರಂದು ಬೆಳಿಗ್ಗೆ 9 ರಿಂದ ಸಂಜೆ 5ರವರೆಗೆ ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ ಹಾಗೂ ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಮುಚ್ಚುವಂತೆ ಮತ್ತು ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಗಳು ಯಾವುದೇ ಕಾರಣಕ್ಕೂ ಮೊಬೈಲ್ ಫೋನ್ , ಇಲೆಕ್ಟ್ರಾನಿಕ್ ಉಪಕರಣಗಳನ್ನು ತರದಂತೆ ಪ್ರಕಟಣೆಯಲ್ಲಿ ಸೂಚಿಸಲಾಗಿದೆ.

### ಡಿ.28 ರಿಂದ ಜನವರಿ 1 ರ ವರೆಗೆ ಗಾಜಿನ ಮನೆಯಲ್ಲಿ ಫಲಪುಷ್ಪ ಪ್ರದರ್ಶನ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ತೋಟಗಾರಿಕೆ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಡಿಸೆಂಬರ್ 28 ರಿಂದ ಜನವರಿ 1 ರವರೆಗೆ ಗಾಜಿನ ಮನೆಯಲ್ಲಿ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮ ಆಯೋಜಿಸಲಾಗಿದೆ. ಡಿಸೆಂಬರ್ 28 ರಂದು ಸಂಜೆ 5 ಗಂಟೆಗೆ ಗಾಜಿನ ಮನೆಯಲ್ಲಿ ಫಲಪುಷ್ಪ ಕಾರ್ಯಕ್ರಮವನ್ನು ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸುವರು. ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್.ಕೆ, ದೂಡಾ ಅಧ್ಯಕ್ಷರಾದ ದಿನೇಶ್. ಕೆ.ಶೆಟ್ಟಿ, ಮಹಾನಗರಪಾಲಿಕೆ ಸದಸ್ಯರಾದ ರೇಖಾ ಸುರೇಶ್ ಗಂಡ್‌ಗಾಳೆ, ತೋಟಗಾರಿಕೆ ಇಲಾಖೆ ಸರ್ಕಾರದ ಕಾರ್ಯದರ್ಶಿ ಡಾ; ಶಮ್ಲ ಇಕ್ಬಾಲ್, ತೋಟಗಾರಿಕೆ ಇಲಾಖೆ ನಿರ್ದೇಶಕರಾದ ರಮೇಶ್ ಡಿ.ಎಸ್ , ಜಂಟಿ ನಿರ್ದೇಶಕರು ಹಾಗೂ ಜಿಲ್ಲಾ ನೋಡಲ್ ಅಧಿಕಾರಿಗಳಾದ ಎಂ.ಜಗದೀಶ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ತೋಟಗಾರಿಕೆ ಉಪನಿರ್ದೇಶಕರಾದ ರಾಘವೇಂದ್ರ ಪ್ರಸಾದ್, ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರಾದ ವೀರಭದ್ರಸ್ವಾಮಿ ಭಾಗವಹಿಸುವರು.

### ವಿಶ್ವ ಮಾನವ ದಿನಾಚರಣೆ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಡಿ.29 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಬೂದಾಳ್ ರಸ್ತೆಯ ಎಸ್‌ಪಿಎಸ್ ನಗರದಲ್ಲಿರುವ ಸಮಾಜ ಕಲ್ಯಾಣ ಇಲಾಖೆ, ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ವಿಶ್ವ ಮಾನವ ದಿನಾಚರಣೆಯನ್ನು ಆಯೋಜಿಸಲಾಗಿದೆ.

### ಪ್ಲಾಸ್ಟಿಕ್ ಕಪ್, ಮೇಣಲೇಪಿತ ಪೇಪರ್ ಲೋಟ, ಬ್ಯಾಗ್ ನಿಷೇಧ


» ದಾವಣಗೆರೆ

ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಬೀದಿಬದಿ ವ್ಯಾಪಾರಸ್ಥರು, ತಿಂಡಿ-ತಿನಿಸು ಮಾರಾಟಗಾರರು, ಹೋಟೆಲ್ ಉದ್ದಿಮೆದಾರರು ಕಾಫಿ, ಚಹಾ, ಪಾನೀಯ, ತಿಂಡಿ-ತಿನಿಸು ಆಹಾರ ಪಧಾರ್ಥಗಳಿಗೆ ಕಪ್, ಮೇಣಲೇಪಿತ ಪೇಪರ್ ಕಪ್ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಚಮಚ, ಸ್ಟ್ರಾಗಳ ಬಳಕೆಯನ್ನು ನಿಷೇದಿಸಲಾಗಿದೆ. ನಗರದ ಯಾವುದೇ ಬೀದಿ ಬದಿ ಮಾರಾಟಗಾರರು, ಹೋಟೆಲ್ ಉದ್ದಿಮೆದಾರರು ಪ್ಲಾಸ್ಟಿಕ್ ಕಪ್, ಮೇಣಲೇಪಿತ ಪೇಪರ್ ಕಪ್ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಚಮಚ, ಸ್ಟ್ರಾಗಳನ್ನು ಉಪಯೋಗಿಸದಂತೆ ಸೂಚಿಸಿದ್ದು, ನಗರದ ಸ್ವಚ್ಛತೆ, ಸೌಂದರ್ಯ ಹಾಗೂ ನಗರದ ಸ್ವಚ್ಛತೆ ಹಾಗೂ ಸಾರ್ವಜನಿಕ ಆರೋಗ್ಯ ಕಾಪಾಡಲು ಸರ್ಕಾರದ ಆದೇಶವನ್ನು ಉಲ್ಲಂಘಿಸಿ ಪ್ಲಾಸ್ಟಿಕ್ ಸಾಮಗ್ರಿಗಳನ್ನು ಉಪಯೋಗಿಸುತ್ತಿರುವುದು ಕಂಡು ಬಂದಲ್ಲಿ ನಿಷೇಧಿತ ಪ್ಲಾಸ್ಟಿಕ್ ಸಾಮಗ್ರಿಗಳನ್ನು ವಶಪಡಿಸಿಕೊಳ್ಳುವುದರೊಂದಿಗೆ ನಿಯಮಾನುಸಾರ ದಂಡ ವಿಧಿಸಲಾಗುವುದು. ಆದ್ದರಿಂದ ಎಲ್ಲಾ ಬೀದಿ ಬದಿ ಮಾರಾಟಗಾರರು, ಹೋಟೆಲ್ ಉದ್ದಿಮೆದಾರರು ತ್ಯಾಜ್ಯನಿರ್ವಹಣಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.



# ಭತ್ತ

## ಬೆಳೆಯುವ ರೈತ ಆತ್ಮಹತ್ಯೆಯತ್ತ, ಅಕ್ಕಿ ಮಾರುವ ವ್ಯಾಪಾರಿ ಅರಮನೆಯತ್ತಾ......



ವೈಕುಂಠ ಏಕಾದಶಿ ಮತ್ತು ರೈತರ ದಿನದ ಆಯ್ಕೆಯಲ್ಲಿ ಬಹುತೇಕ ಮಹಿಳೆಯರು ಮತ್ತು ಮಾಧ್ಯಮಗಳು ವೈಕುಂಠ ಏಕಾದಶಿಗೆ ಮಹತ್ವ ನೀಡಿದರು. ಆಹಾರ ಮತ್ತು ಭಕ್ತಿಯ ನಡುವೆ ಭಕ್ತಿಯೇ ಪ್ರಧಾನವಾಯಿತು....

ಬೆವರಿನ ಮುಂದೆ ಸ್ನಾನವೇ ಶ್ರೇಷ್ಠವಾಯಿತು.........

ನಾವೆಲ್ಲರೂ ನೆನಪಿಡಬೇಕಾದ – ಪ್ರೀತಿಯಿಂದ – ಹೃದಯದಾಳದಿಂದ ಕೃತಜ್ಞತೆ ಸಲ್ಲಿಸಬೇಕಾದ ಅತ್ಯಂತ ಮಹತ್ವದ ದಿನ..........

### ರಾಷ್ಟ್ರೀಯ ರೈತ ದಿನ

( ಕಿಸಾನ್ ದಿವಸ್ )
ಡಿಸೆಂಬರ್ 23...
ಮಾಜಿ ಪ್ರಧಾನಿ ದಿವಂಗತ ಚೌಧರಿ ಚರಣ್ ಸಿಂಗ್ ಅವರ ಜನ್ಮದಿನದ ಅಂಗವಾಗಿ.......

### ರೈತ ಹುತಾತ್ಮ ದಿನ

ಜೂನ್ 21..
( ಕರ್ನಾಟಕದಲ್ಲಿ ಮಾತ್ರ )
ನರಗುಂದ – ನವಲಗುಂದ ಹೋರಾಟದಲ್ಲಿ ಹುತಾತ್ಮರಾದ ರೈತರ ನೆನಪಿಗಾಗಿ...

### ಅನ್ನದಾತ ಅನಾಥನಾಗುವ ಮುನ್ನ.......

### ಅನ್ನಕ್ಕಾಗಿ ನಾವು ಪರದಾಡುವ ಮುನ್ನ......

ರೈತರಿಗೆ ಕೊಡಲು ನಮ್ಮ ಬಳಿ ಹಣವಿಲ್ಲ, ರೈತರ ಸಂಕಷ್ಟ ಪರಿಹರಿಸಲು ನಮ್ಮ ಬಳಿ ಅಧಿಕಾರವೂ ಇಲ್ಲ, ಸಣ್ಣ ಪುಟ್ಟ ಹೋರಾಟಗಳಿಗೆ ಕೈ ಜೋಡಿಸಿದರು ಉತ್ತಮ ಫಲಿತಾಂಶ ಕಾಣುತ್ತಿಲ್ಲ. ಏಕೆಂದರೆ ಪ್ರಾಮುಖ್ಯತೆ ಕೊಡಬೇಕಾದ ವಿಷಯಗಳನ್ನು ಮರೆಸಿ ಭಾವನಾತ್ಮಕ ಅಂಶಗಳನ್ನು ಮುನ್ನಲೆಗೆ ತಂದು ಇಡೀ ರೈತ ಸಮೂಹವನ್ನು ವಂಚಿಸಲಾಗುತ್ತಿದೆ. ಮನರಂಜನೆಗೆ ಸಾಕಷ್ಟು ಪ್ರೇಕ್ಷಕರಿದ್ದಾರೆ,

ರಾಜಕಾರಣಕ್ಕಾಗಿಸಾಕಷ್ಟುಹಿಂಬಾಲಕರಿದ್ದಾರೆ, ಧಾರ್ಮಿಕ ಕೆಲಸಗಳಿಗೆ ಸಾಕಷ್ಟು ಭಕ್ತರಿದ್ದಾರೆ,

ಆದರೆ ರೈತರ ಕಷ್ಟಗಳಿಗೆ ಧ್ವನಿಯಾಗಲು ಮಾತ್ರ ಕೆಲವೇ ಜನರಿದ್ದಾರೆ.

ಅದಕ್ಕೆ ಕಾರಣ ಜನರಿಗೆ ತಿನ್ನುವ ಅನ್ನ ಬೆಳೆಯುವ ಕೃಷಿ ಎಂಬುದು ಏನು ಎಂದೇ ಸರಿಯಾದ ತಿಳಿವಳಿಕೆ ಇಲ್ಲ.

ದುಡಿದು ದುಡಿದು ಸವೆಯುತ್ತಿರುವ ರೈತರು......

ತಿಂದು ತಿಂದು ಕೊಬ್ಬುತ್ತಿರುವ ಕೆಲವರು......

ದುಡಿಯದೇ ತಿನ್ನುತ್ತಾ ಅನ್ನವೇ ವಿಷವಾಗಿ ಸಾಯುತ್ತಿರುವ ಹಲವರು...

ಕೃಷಿ ಮತ್ತು ರೈತ ನಮ್ಮ ಕಣ್ಣ ಮುಂದೆಯೇ ಬಿಕ್ಕಳಿಸುವುದನ್ನು ನೋಡುವ ದೌರ್ಭಾಗ್ಯ ನಮ್ಮದು...ಏಳಿ ಎದ್ದೇಳಿ ಎಚ್ಚರಗೊಳ್ಳಿ ,

ಅರ್ಥಮಾಡಿಕೊಳ್ಳಿ ನೀವು ದಡ್ಡರೆಂದು,

ಆಗ ನಿಮಗೆ ಅರಿವಾಗುತ್ತದೆ ನೀವು ಯಾರೆಂದು,ಆಗ ನಿಮ್ಮ ಶೋಷಣೆಯ ಕಾರಣಗಳು ಅರ್ಥವಾಗುತ್ತದೆ, ಬೆನ್ನು ಮೂಳೆಗೂ ಎಲುಬಿಲ್ಲದ ನಾಲಿಗೆಗೂ ಇರುವ ವ್ಯತ್ಯಾಸ,ಆಗ ತೋರಿಸಿ ಈ ದುರಹಂಕಾರಿಗಳಿಗೆ ಅನ್ನದ ಮಹತ್ವ,ಆಗ ನೋಡಿ ನಿಮ್ಮ ಕಾಲಿಗೆ ಬೀಳುತ್ತಾರೆ, ನೀವೇ ಅನ್ನದಾತರೆಂದು,

ಆಮೇಲೆ ಪ್ರತಿದಿನವೂ ನಿಮ್ಮನ್ನೇ ನೆನಪಿಸಿಕೊಳ್ಳುತ್ತಾರೆ,ಅಲ್ಲಿಯವರೆಗೂ ನಿಮ್ಮ ದಿನ ನಿಮ್ಮ ತ್ಯಾಗ ಯಾರಿಗೂ ನೆನಪಾಗುವುದಿಲ್ಲ.

ಇದನ್ನು ಸಾಧ್ಯವಾಗಿಸಬೇಕಾಗಿರುವುದು ಶೇಕಡ 70% ರಷ್ಟು ಇರುವ ರೈತರ ವಿದ್ಯಾವಂತ ಮಕ್ಕಳು. ಅವರುಗಳು ಜಾಗೃತರಾದರೆ ಯಾರೂ ತಡೆಯಲು ಸಾಧ್ಯವಿಲ್ಲ.

ರೈತರಾಗುವುದು ವರವೋ ? ಶಾಪವೋ ?

ಅನ್ನದಾತ – ದೇಶದ ಬೆನ್ನೆಲುಬು – ರೈತನೇ ದೇವರು ಈ ಭಾವನಾತ್ಮಕ ನಂಬಿಕೆಗಳನ್ನು ಸ್ವಲ್ಪ ಪಕ್ಕಕ್ಕೆ ಸರಿಸಿ ವಾಸ್ತವ ಪರಿಶೀಲಿಸೋಣ......
ಈ ಕ್ಷಣದಲ್ಲಿ
" ತಿನ್ನುವವರಿಗೆ ವರ,

ಬೆಳೆಯುವವರಿಗೆ ಶಾಪ " ಮಂಗನಿಂದ ಮಾನವನಾದ ಕಾಲ ಮುಗಿದು ಕ್ರಮೇಣ ಮಾನವ ಮಂಗನಾಗುತ್ತಿರುವ ಈ ಸನ್ನಿವೇಶದಲ್ಲಿ ರೈತ ಮಾತ್ರ ಆಗಲೂ ಮಂಗನೇ ಈಗಲೂ ಮಂಗನೇ ಎಂದು ವಿಷಾದದಿಂದ, ದುಃಖದಿಂದ ಮತ್ತು ಆಕ್ರೋಶದಿಂದ ಹೇಳಬೇಕೆನಿಸುತ್ತದೆ.

ಎಲ್ಲಾ ಕ್ಷೇತ್ರಗಳು ಅಭಿವೃದ್ಧಿಯ ಪಥದಲ್ಲಿ ಸಾಕಷ್ಟು ಮುನ್ನಡೆಯುತ್ತಿರುವಾಗ ಶಿಕ್ಷಣ ಸಾಹಿತ್ಯ ಸಂಗೀತ ವಿಜ್ಞಾನ ಆರೋಗ್ಯ ಆಡಳಿತ ಸಾರಿಗೆ ಸಂಪರ್ಕ ದಿನದಿನಕ್ಕೂ ಹೊಸ ಹೊಸ ಆಯಾಮ ಪಡೆದುಕೊಳ್ಳುತ್ತಿರುವಾಗ ಭಾರತದ ಕೃಷಿ ಮಾತ್ರ ಎಲ್ಲೋ ಕೆಲವು ಸಣ್ಣ ಪುಟ್ಟ ಬದಲಾವಣೆ ಹೊರತುಪಡಿಸಿ ಮೂಲ ನಿಯಮಗಳು ಮಾತ್ರ ಇನ್ನೂ ಗತಕಾಲದ ಅಂಶಗಳನ್ನೇ ಅಳವಡಿಸಿಕೊಂಡಿದೆ.

ಭೂಮಿಯ ಉಪಯೋಗ, ಬಿತ್ತನೆ, ನೀರಾವರಿ, ಸಸ್ಯಗಳ ಬೆಳವಣಿಗೆ, ಕಟಾವು, ಸಂಗ್ರಹಣೆ, ಮಾರುಕಟ್ಟೆ, ಬೆಲೆ ನಿಗದಿ, ಲಾಭ ಹಣದ ಉಪಯೋಗ, ನಷ್ಟದ ಪರಿಸ್ಥಿತಿಯ ನಿರ್ವಹಣೆ, ಕೌಟುಂಬಿಕ ನಿರ್ವಹಣೆ, ನಂಬಿಕೆಗಳು, ಅರಿವು ಮತ್ತು ಅವರ ಒಟ್ಟು ವ್ಯಕ್ತಿತ್ವ ಸಮಾಜದ ದೃಷ್ಟಿಯಲ್ಲಿ ಇನ್ನೂ ಹಾಸ್ಯಾಸ್ಪದವಾಗಿಯೇ ಇದೆ. ಅವರನ್ನು ಶೋಷಿಸಲು ಯಾವ ತಂತ್ರಗಳೂ ಬೇಡ. ಆತನ ವ್ಯಕ್ತಿತ್ವವೇ ಶೋಷಣೆಯನ್ನು ಸ್ವತಃ ತಾನೇ ಒಪ್ಪಿಕೊಳ್ಳುವ ಮನಸ್ಥಿತಿ ಹೊಂದಿದೆ.

ವ್ಯಕ್ತಿಮೂಲಭೂತವಾಗಿ ಪ್ರಜ್ಞಾವಂತನಾಗಿದ್ದರೆ ಆತ ಮಾಡುವ ಕೆಲಸಗಳು ಸಹ ಘನತೆಯಿಂದ ಕೂಡಿರುತ್ತದೆ. ವೈದ್ಯನೇ ಇರಬಹುದು, ಇಂಜಿನಿಯರೇ ಇರಬಹುದು, ಚಾಲಕ ಶಿಕ್ಷಕ ವಕೀಲ ರಾಜಕಾರಣಿ ವ್ಯಾಪಾರೋದ್ಯಮಿ ಯಾರೇ ಆಗಲಿ ಧೃಡ ಮನಸ್ಸಿನ ಅರಿವಿರುವ ವ್ಯಕ್ತಿತ್ವ ಅವನದಾಗಿದ್ದರೆ ಆತ ಯಾವುದೇ ವ್ಯವಸ್ಥೆಯಲ್ಲಿ ಕನಿಷ್ಠ ಉತ್ತಮ ಬದುಕನ್ನು ರೂಪಿಸಿಕೊಳ್ಳಬಹುದು.

ಆದರೆ ಮೂಲ ಸಾಮಾನ್ಯ ಜ್ಞಾನ ಇಲ್ಲದ ವ್ಯಕ್ತಿ ಯಾವುದೇ ಕೆಲಸ ಮಾಡಿದರೂ ಆತ ಸೋಲುವ ಸಂಕಷ್ಟಕ್ಕೆ ಗುರಿಯಾಗುವ ಸಾಧ್ಯತೆಯೇ ಹೆಚ್ಚು.

ವಾಸ್ತವವಾಗಿ ಭಾರತೀಯ ಬಹುತೇಕ ರೈತರು ಸಾಮಾನ್ಯ ಜ್ಞಾನದಿಂದ ವಂಚಿತರಾಗಿದ್ದಾರೆ. ಜಾಗತೀಕರಣದ ಸ್ಪರ್ಧಾತ್ಮಕ ಬದಲಾವಣೆಗಳನ್ನು ಗಮನಿಸಲೇ ಸಾಧ್ಯವಾಗದಂತ ಕತ್ತಲೆಯಲ್ಲಿ ಮುಳುಗುತ್ತಿದ್ದಾರೆ. ರಾಜಕಾರಣಿಗಳ, ಮಧ್ಯವರ್ತಿಗಳ, ವ್ಯಾಪಾರಿ ವಾಣಿಜ್ಯೋದ್ಯಮಿಗಳ ಬಲೆಯೊಳಗೆ ಬಹು ಸುಲಭವಾಗಿ ಸಿಕ್ಕಿಹಾಕಿಕೊಂಡಿದ್ದಾರೆ.

ಬಲಿಷ್ಠ ರಕ್ಷಣಾತ್ಮಕ ಆಡಳಿತ ವ್ಯವಸ್ಥೆ ಹೊಂದಿರುವ ಸರ್ಕಾರದ ವಿರುದ್ಧ ಇನ್ನೂ ಹಳೆಯ ಅಸ್ತ್ರಗಳಾದ ಪ್ರತಿಭಟನೆ, ಮುತ್ತಿಗೆ, ಉಪವಾಸ, ಸತ್ಯಾಗ್ರಹ ಎಂಬ ಮೊಂಡಾದ ಕತ್ತಿಯನ್ನು ಉಪಯೋಗಿಸುತ್ತಿದ್ದಾರೆ.

ಅತಿಯಾದ ಜನಸಂಖ್ಯೆಯ ಪರಿಣಾಮ ಮತ್ತು ಬಡತನ ಅಜ್ಞಾನದ ಕಾರಣದಿಂದ ಅನಿವಾರ್ಯವಾಗಿ ಒಡೆದು ಆಳುವ ರಾಜಕೀಯ ಪಕ್ಷಗಳ ಒತ್ತಡಕ್ಕೆ ಒಳಗಾಗುತ್ತಾರೆ ಮತ್ತು ಅತಿಯಾದ ಹಣದ ಹರಿವಿನಿಂದ ಹಾಗು ಹಣದ ಮಹತ್ವದಿಂದ ರೈತನೆಂಬುದು ಶಾಪವಾಗಿ ಮಾರ್ಪಟ್ಟಿದೆ.

ಇದು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ಎಂಬುದನ್ನು ಮರೆಯದಿರಿ. ಮತ ಎಂಬುದು ನಮ್ಮ ಮತಿಯ ( ಮನಸ್ಸಿನ ) ಅಸ್ತ್ರವಾದಾಗ.......

ಒಂದು ವೇಳೆ ಹೊಸ ನಾಯಕತ್ವದ ಹೊಸ ಚಿಂತನೆಯ ಹೊಸ ಗಾಳಿಯೊಂದು ಬಲವಾಗಿ ರೈತರ ಮನಸ್ಸಿನಲ್ಲಿ ಬೀಸಿ ಅವರನ್ನು ಪ್ರಬುದ್ಧತೆಯೆಡಗೆ ಆಧುನಿಕತೆಯೆಡೆಗೆ,

ಸ್ವತಂತ್ರ ಚಿಂತನೆಯೆಡೆಗೆ ಮುನ್ನಡೆಸಿದರೆ.....

ವಿಧಾನಸೌದ – ಪಾರ್ಲಿಮೆಂಟು, ಅಧಿಕಾರ 'ಶಾಹಿ, ವ್ಯಾಪಾರಿಗಳು, ಮಧ್ಯವರ್ತಿಗಳು,

ವೃತ್ತಿನಿರತರು,

ಅಷ್ಟೇ ಏಕೆ, ಇಡೀ ವ್ಯವಸ್ಥೆಯೇ ಬುಡಮೇಲಾಗಿ " ರೈತನೇ ಅನ್ನದಾತ. ನಮ್ಮ ಬದುಕಿನ ಜೀವ ದ್ರವ್ಯ ರೈತನೇ " ಎಂದು ಕೂಗಿ ಹೇಳುತ್ತಾ ಎಲ್ಲರೂ ಆತನ ಬಗ್ಗೆ ಘನತೆಯಿಂದ ನಡೆದುಕೊಳ್ಳುವ ದಿನಗಳು ಬರುತ್ತದೆ.

ಮುಖ್ಯವಾಗಿ ರೈತನನ್ನು ಹಾಸ್ಯಾಸ್ಪದವಾಗಿ ನೋಡುವ ಮನರಂಜನಾ ಉದ್ಯಮ, ರಾಜಕೀಯ ವ್ಯವಸ್ಥೆ, ವಾಣಿಜ್ಯೋಧ್ಯಮ, ಮಧ್ಯವರ್ತಿ ವೃತ್ತಿಯಲ್ಲಿರುವವರು ತಾವೇ ಹಾಸ್ಯಾಸ್ಪದವಾಗುತ್ತಾರೆ..

ಆ ಹೊಸ ನಾಯಕತ್ವ ಮತ್ತು ಚಿಂತನೆಯ ತಂಗಾಳಿಗಾಗಿ ಕಾಯುತ್ತಿರುವ..........

ಹಾಗಾಗಲಿ ಎಂದು ಆಶಿಸುತ್ತಾ ................

ನನ್ನ ಪ್ರೀತಿಯ ಗೆಳೆಯ ಗೆಳತಿಯರೇ......

ನಿಂಬೆ ಹಣ್ಣು ಮಾರುವ ಅಜ್ಜಿಯ ಬಳಿ ಚೌಕಾಸಿ ಮಾಡದಿರಿ.......

ಸೊಪ್ಪಿನ ಅಜ್ಜನ ಬಳಿ ಕೊಸರಾಡದಿರಿ.......

- **ಕಡಲೆಕಾಯಿ ಮಾರುವವರ ಹತ್ತಿರ ಜಗಳವಾಡದಿರಿ........**
- **ಹಣ್ಣಿನವನ ಹತ್ತಿರ ಪೌರುಷ ತೋರದಿರಿ.....**
- **ಎಳನೀರಿನವರ ಬಳಿ ಜುಗ್ಗುತನದಿಂದ ವರ್ತಿಸದಿರಿ........**
- **ಹೂವಿನವರ ಹತ್ತಿರ ನಿಮ್ಮೆಲ್ಲಾ ಜಿಪುಣತನ ಖರ್ಚುಮಾಡದಿರಿ.......**
- **ಗೊತ್ತೇ ನಿಮಗೆ ಹಣ್ಣು ತರಕಾರಿ ಸೊಪ್ಪು ಬೇಳೆಕಾಳುಗಳು ಭತ್ತ ಬೆಳೆಯುವವರ ಕಷ್ಟ,.....**
- **ಗೊತ್ತೇ ನಿಮಗೆ ಅವು ಬೆಳೆಯಲು ಎಷ್ಟು ದಿನ ಬೇಕೆಂದು......**
- **ಗೊತ್ತೇ ನಿಮಗೆ ಅದು ಫಸಲಾಗಲು ಎಷ್ಟು ಜನರು ಶ್ರಮಪಡಬೇಕೆಂದು.....**
- **ಗೊತ್ತೇ ನಿಮಗೆ ಅದಕ್ಕೆ ತಗಲುವ ಖರ್ಚು ಎಷ್ಟೆಂದು..........**
- **ಗೊತ್ತೇ ನಿಮಗೆ ಅದರ ಆರೈಕೆ ಎಷ್ಟು ಕಷ್ಟವೆಂದು.......**
- **ಗೊತ್ತೇ ನಿಮಗೆ ಅದರ ಕಟಾವಿನಲ್ಲಿ ಸುರಿಯುವ ಬೆವರು ಎಷ್ಟೆಂದು.......**
- **ಗೊತ್ತೇ ನಿಮಗೆ ಅದರ ಸಾಗಾಣಿಕೆಯ ಕರ್ಮಕಾಂಡ.........**
- **ಗೊತ್ತೇ ನಿಮಗೆ ಅದರಲ್ಲಿ ಆಗುವ ಸೋರಿಕೆಯ ನಷ್ಟ ಎಷ್ಟೆಂದು.......**
- **ಗೊತ್ತೇ ನಿಮಗೆ ಇಷ್ಟಾದರೂ ಅದಕ್ಕೆ ಸಿಗುವ ಪ್ರತಿಫಲ ಎಷ್ಟೆಂದು.....**
- **ನಿಮ್ಮ ಮನೆಯಲ್ಲಿ ಬೇಯುವ ಅನ್ನ ಕಂಪ್ಯೂಟರ್ ನಲ್ಲಿ ತಯಾರಾದದ್ದಲ್ಲ......**
- **ನೀವು ಊಟ ಮಾಡುವ ತರಕಾರಿ ಇಂಟರ್ನೆಟ್ ನಲ್ಲಿ ಬೆಳೆದದ್ದಲ್ಲ......**
- **ಅದು ರೈತರ ಬೆವರ ಹನಿಗಳಿಂದ ಬಸಿದದ್ದು...........**
- **ತಾಕತಿದ್ದರೆ Pizza - Burger ಹೋಟೆಲ್ ಗಳಲ್ಲಿ ಚೌಕಾಸಿ ಮಾಡಿ........**
- **ಧೈರ್ಯವಿದ್ದರೆ Shopping mall ಗಳಲ್ಲಿ ಕೊಸರಾಡಿ..........**
- **ಶಕ್ತಿಯಿದ್ದರೆ Multiplex theater ಟಿಕೆಟ್ ಕೌಂಟರ್ ನಲ್ಲಿ ಜಗಳವಾಡಿ........**
- **ಸದ್ಯಕ್ಕೆ ಸಾಮಾನ್ಯರಿಗೆ ಊಟಕ್ಕೇನು ಕೊರತೆ ಇಲ್ಲ,**
- **ರಾಜಕಾರಣಿಗಳಿಗೆ ಓಟು ಕೊಳ್ಳಲು ಸಮಸ್ಯೆ ಇಲ್ಲ,**
- **ಉದ್ಯಮಿಗಳಿಗೆ ವ್ಯಾಪಾರಕ್ಕೇನು ತೊಂದರೆ ಇಲ್ಲ,......**
- **ಡಾಕ್ಟರು, ಆಕ್ಟರು, ಮೇಷ್ಟರು, ಲಾಯರು, ಆಡಿಟರು, ಬ್ರೋಕರು, ಆಫೀಸರು ಯಾರಿಗೂ ತೊಂದರೆ ಏನೂ ಇಲ್ಲ....**

ನೋಡೋಣ ಮುಂದೆ..

ರೈತರೆಲ್ಲ ವಿಷ ಕುಡಿದು ಸತ್ತ ಮೇಲೆ, ಊಟಕ್ಕೆ ತೊಂದರೆಯಾದ ಮೇಲೆ ರೈತರನ್ನು ನೆನಪಿಸಿಕೊಳ್ಳೋಣ.......

ಅಲ್ಲಿಯವರೆಗೂ ಚೆನ್ನಾಗಿ ಊಟ ಮಾಡ್ಕೊಂಡು ಎಲ್ರೂ ಆರಾಮವಾಗಿರಿ.........

ಬೆಳಗಿನ ಬಿಸಿ ಬಿಸಿ ಕಾಫಿ ಟೀ,


ನಂತರದ ಉಪ್ಪಿಟ್ಟು ಚಿತ್ರಾನ್ನ ಇಡ್ಲಿ ವಡೆ ದೋಸೆ,

ಮಧ್ಯಾಹ್ನದ ರೊಟ್ಟಿ ಚಪಾತಿ ಮುದ್ದೆ ಅನ್ನ, ಸಂಜೆಯ ಪಾನಿಪುರಿ, ಮಸಾಲಾ ಪುರಿ, ಬೇಲ್ ಪುರಿ, ವಡಾ ಪಾವ್, ಪಾವ್ ಬಾಜಿ, ರಾತ್ರಿಯ ಚಿಕನ್ ಮಟನ್ ರೋಟಿ, ದಾಲ್ ಪಾಲಾಕ್, ದೋಕ್ಲಾ, ಕಿಚಡಿ ಎಲ್ಲಾ ದುಡ್ಡು ಕೊಟ್ಟರೆ ಸಿಗುತ್ತದೆ.

ಮನೆಗೇ ತಂದು ಕೊಡುತ್ತಾರೆ.ಫಾದರ್ಸ್ ಡೇ, ಮದರ್ಸ್ ಡೇ, ಚಿಲ್ಡ್ರನ್ಸ್ ಡೇ, ವ್ಯಾಲೆಂಟೈನ್ ಡೇ, ಆ ಡೇ ಈ ಡೇ....ಎಲ್ಲಾ ಸಂಭ್ರಮದಿಂದ ಆಚರಿಸಿ.....ನೋಡೋಣ ಗಾಡಿ ಹೀಗೆ ಎಷ್ಟು ದೂರ ಹೋಗುತ್ತೆ ಅಂತ..........

ರೈತರ ಬೆವರಿನ ಘಮಲು,ಶ್ರಮದ ನಿಟ್ಟುಸಿರು,ನಿರಾಸೆಯ ಆಕ್ರಂದನ,ನೋವಿನ ಕೂಗು,ಈ ಸಮಾಜಕ್ಕೆ ತಟ್ಟುವವರೆಗೂ...... ಮನುಷ್ಯ ಪ್ರಾಣಿಗಳ ಸುಖಕ್ಕೆ ತೊಂದರೆಯೇನು ಇಲ್ಲ......ಆತ್ಮವಂಚಕರು ನಾವುಆತ್ಮವಂಚಕರು...

ಕ್ಷಮಿಸಿ, ಇದು ಯಾರ ವಿರುದ್ಧದ ದ್ವೇಷವೂ ಅಲ್ಲ,ನಿಮ್ಮ ಮನಸ್ಸಿನ ಜಾಗೃತಿಗಾಗಿ, ನಿಮ್ಮ ಗಮನ ಸೆಳೆಯಲು,ರೈತರ ಶ್ರಮವನ್ನು ನಿಮಗೆ ನೆನಪಿಸಲು,ಆಹಾರದ ಮಹತ್ವ ಸಾರಲು ಮಾತ್ರ.......ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T